ಸಂಪುಟ : 10 ಸಂಚಿಕೆ: 52 ಪುಟ : 4+2 ಬೆಲೆ: 3.00 ಬುಧವಾರ ಮಾರ್ಚ್ 26 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 52 Pages : 4+2 Price : 3.00 Wednesday March 26 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಕೌಶಲ್ಯಾಭಿವೃದ್ಧಿ ತರಬೇತಿಗಾಗಿ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಪ್ರವಾಸೋದ್ಯಮ ಇಲಾಖೆಯು ಮೈಸೂರಿನ ಫುಡ್ ಕ್ರಾಫ್ಟ್ ಇನ್ಸ್ಟಿಟ್ಯೂಟ್ ಮತ್ತು ಬೆಂಗಳೂರಿನ ಇನ್ಸ್ಟಿಟ್ಯೂಟ್ ಆಫ್ ಹೋಟೆಲ್ ಮ್ಯಾನೇಜ್‌ಮೆಂಟ್ ಮೂಲಕ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿಯಲ್ಲಿ ಪ.ಜಾ/ಪ.ಪಂ.ಗಳ ಅಭ್ಯರ್ಥಿಗಳಿಗೆ 2ನೇ ಹಂತದ ಕೌಶಲ್ಯಾಭಿವೃದ್ಧಿ ತರಬೇತಿ ಆಯೋಜಿಸಲಾಗಿದ್ದು, ಫುಡ್ & ಬೆವರೇಜ್ ಸರ್ವಿಸ್ ಸ್ಟೀವರ್ಡ್ ಹಾಗೂ ಮಲ್ಟಿ ಕ್ಯುಜಿನ್ ಕುಕ್ ತರಬೇತಿ ಕಾರ್ಯಕ್ರಮಗಳಿಗಾಗಿ 20–45 ವರ್ಷದೊಳಗಿನ ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿಗಳನ್ನು ಪಡೆಯಲು ಸಹಾಯಕ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಗದಗ ಕಛೇರಿಯಲ್ಲಿ ಅರ್ಜಿಗಳನ್ನು ವಿತರಿಸಲಾಗುವುದು. ಸದರಿ ತರಬೇತಿ ಪಡೆಯಲು ಆಸಕ್ತಿ ಇರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಅರ್ಜಿಗಳನ್ನು 03/04/2025ರ ಸಂಜೆ 5.30ರೊಳಗೆ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಛೇರಿ, ಪ್ರವಾಸೋದ್ಯಮ ಇಲಾಖೆ, ಎ.ಸಿ. ಕಛೇರಿ ಕಟ್ಟಡ, ಗದಗ–582103 ಇವರನ್ನು ಕಛೇರಿ ವೇಳೆಯಲ್ಲಿ ಖುದ್ದಾಗಿ ಸಂಪರ್ಕಿಸಬಹುದು ಅಥವಾ ಕಛೇರಿಯ ದೂರವಾಣಿ ಸಂಖ್ಯೆ: 08372–233017 ಮೂಲಕ ಮಾಹಿತಿ ಪಡೆಯಬಹುದು ಎಂದು ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ಕೊಟ್ರೇಶ್ವರ ವಿಭೂತಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರೈತರ ಮಕ್ಕಳಿಗೆ ತೋಟಗಾರಿಕೆ ತರಬೇತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ 2025–26ನೇ ಸಾಲಿನ ತರಬೇತಿ ಪಡೆಯಲು 2–5–2026ರಿಂದ 28–2–2026ರವರೆಗೆ ರೈತರ ಮಕ್ಕಳಿಗೆ 10 ತಿಂಗಳ ತೋಟಗಾರಿಕೆ ತರಬೇತಿಯನ್ನು ಹಮ್ಮಿಕೊಳ್ಳಲಾಗುವುದು.

ಅರ್ಜಿಗಳನ್ನು ಮಾರ್ಚ್ 31ರವರೆಗೆ ವಿತರಿಸಲಾಗುವುದು. ಅರ್ಜಿಗಳನ್ನು ಸ್ವೀಕರಿಸುವ ಕೊನೆಯ ದಿನ ಏಪ್ರಿಲ್ 1 ಆಗಿದ್ದು, ಏಪ್ರಿಲ್ 8ರಂದು ಬೆಳಿಗ್ಗೆ 11 ಗಂಟೆಗೆ ಗದಗ ಭೀಷ್ಮಕೆರೆ ಹತ್ತಿರದ ತೋಟಗಾರಿಕೆ ಉಪನಿರ್ದೇಶಕರ ಕಚೇರಿಯಲ್ಲಿ ಸಂದರ್ಶನ ನಡೆಸಲಾಗುವುದು. ಆಯ್ಕೆ ಪಟ್ಟಿಯನ್ನು ಏಪ್ರಿಲ್ 16ರಂದು ಪ್ರಕಟಿಸಲಾಗುವುದು. ಅಭ್ಯರ್ಥಿಗಳು ಕನಿಷ್ಠ ಎಸ್.ಎಸ್.ಎಲ್.ಸಿ. ಉತ್ತೀರ್ಣರಾಗಿರಬೇಕು. ಅಭ್ಯರ್ಥಿ ತಂದೆ/ ತಾಯಿ/ ಪೋಷಕರು ಕಡ್ಡಾಯವಾಗಿ ಜಮೀನು ಹೊಂದಿರಬೇಕು. ಇದಕ್ಕೆ ಸಂಬಂಧಿಸಿದಂತೆ ಕಂದಾಯ ಇಲಾಖೆಯಿಂದ ದೃಢೀಕರಣ ಪತ್ರ ನೀಡುವುದು. ಇಲಾಖೆಯ ವೆಬ್ ಸೈಟ್ https://horticulturedir.karnataka.ರಂತ.ುಟಿ ನಲ್ಲಿ ಅಥವಾ ತೋಟಗಾರಿಕೆ ಕಚೇರಿಯಲ್ಲಿ ಮಾರ್ಚ್ 31ರವರೆಗೆ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಆಯಾ ಜಿಲ್ಲೆಯ ಸಹಾಯಕ ತೆ–ೂೀಟಗಾರಿಕಾ ನಿರ್ದೇಶಕರು (ರಾಜ್ಯ ವಲಯ) ಮತ್ತು ತಾಲೂಕು ಮಟ್ಟದ ತೋಟಗಾರಿಕೆ ಅಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ.

### ಕಾಂಗ್ರೆಸ್ ಸರ್ಕಾರದ ಸರ್ವಾಧಿಕಾರಿ ನಿಲುವುಗಳನ್ನು ಖಂಡಿಸಿ ಜಿಲ್ಲಾ ಬಿಜೆಪಿ ಘಟಕದಿಂದ ಪ್ರತಿಭಟನೆ

# ಧರ್ಮಾಧಾರಿತ ಮೀಸಲಾತಿ ಅಸಂವಿಧಾನಿಕ

■ ವಿಜಯಸಾಕ್ಷಿ ಸುದ್ದಿ, ಗದಗ

18 ಜನ ಶಾಸಕರನ್ನು ಸದನದಿಂದ ಅಮಾನತು ಮಾಡಿದ ಸ್ಪೀಕರ್ ನಿರ್ಣಯವನ್ನು ಮತ್ತು ಅಲ್ಪಸಂಖ್ಯಾತರಿಗೆ ಕಾಮಗಾರಿ ಗುತ್ತಿಗೆ ನೀಡುವಾಗ ಶೇ. 4ರಷ್ಟು ಮೀಸಲಾತಿಯನ್ನು ನೀಡಿರುವ ರಾಜ್ಯ ಸರ್ಕಾರದ ಕ್ರಮವನ್ನು ಖಂಡಿಸಿ ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಘಟಕದಿಂದ ಮಂಗಳವಾರ ನಗರದ ಮಹಾತ್ಮ ಗಾಂಧಿ ವೃತ್ತದಲ್ಲಿ ಬೃಹತ್ ಪ್ರತಿಭಟನೆ ನಡೆಸಿ, ಸರ್ಕಾರದ ಕ್ರಮವನ್ನು ಖಂಡಿಸಿದರು.




ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದ ಶಿರಹಟ್ಟಿ ಕ್ಷೇತ್ರದ ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ರಾಜ್ಯದ ಕಾಂಗ್ರೆಸ್ ಸರ್ಕಾರ ಎಲ್ಲ ಕ್ಷೇತ್ರಗಳಲ್ಲಿ ವಿಫಲವಾಗಿದ್ದು, ಆರ್ಥಿಕವಾಗಿ ದಿವಾಳಿಯಾಗಿದೆ. ಸರ್ಕಾರದ ಸರ್ವಾಧಿಕಾರಿ ನಿರ್ಣಯವನ್ನು ಭಾರತೀಯ ಜನತಾ ಪಾರ್ಟಿ ಖಂಡಿಸುತ್ತದೆ. ಇಂತಹ ಸಂದರ್ಭದಲ್ಲಿ ಸಭಾಧ್ಯಕ್ಷರು ನಿಯಮಾನುಸಾರ ಪಕ್ಷಾತೀತವಾಗಿ ನಿರ್ಣಯ ತೆಗೆದುಕೊಳ್ಳಬೇಕಾಗಿತ್ತು. ಆದರೆ ಅವರು ಈ ತರಹದ ನಿರ್ಣಯವನ್ನು ಯಾರ ಒತ್ತಡಕ್ಕೆ ಮಣಿದು ತೆಗೆದು–ಕೊಂಡಿದ್ದಾರೆ ಎಂಬುದು ತಿಳಿಯಬೇಕಾಗಿದೆ ಎಂದರು.

ಪ್ರತಿಭಟನೆಯಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಸರ್ಕಾರದ ನಿರ್ಧಾರವನ್ನು ಖಂಡಿಸಿದರು. ಪ್ರತಿಭಟನಾ ಸಭೆಯ ನಂತರ ಮಾನವ ಸರಪಳಿಯನ್ನು ನಿರ್ಮಿಸಿ ಗಾಂಧಿ ವೃತ್ತದಲ್ಲಿ ರಸ್ತಾರೋಖೋ ನಡೆಸಿ, ಸರ್ಕಾರದ ನೀತಿಯನ್ನು ಖಂಡಿಸಿ ಜಿಲ್ಲಾಧ್ಯಕ್ಷರ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳಿಗೆ ಮನವಿ ಅರ್ಪಿಸಲಾಯಿತು.

ಪ್ರತಿಭಟನೆಯಲ್ಲಿ ಬಿಜೆಪಿ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ಪಕ್ಕಿರೇಶ ರಟ್ಟಿಹಳ್ಳಿ, ಆರ್.ಕೆ. ಚವ್ಹಾಣ, ನಾಗರಾಜ ಕುಲಕರ್ಣಿ, ಹಿರಿಯರಾದ ಎಂ.ಎಸ್. ಕರಿಗೌಡ್ರ, ಜಗನ್ನಾಥಸಾ ಭಾಂಡಗೆ, ಉಮೇಶಗೌಡ ಸಿ.ಪಾಟೀಲ, ಗದಗ ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ, ಗ್ರಾಮೀಣ ಅಧ್ಯಕ್ಷ ಬೂದಪ್ಪ ಹಳ್ಳಿ, ತೋಟೊಸಾ ಭಾಂಡಗೆ, ಬಿ.ಎಚ್. ಲದ್ವಾ, ಎಂ.ಎಂ. ಹಿರೇಮಠ, ವಿಜಯಕುಮಾರ ಗಡ್ಡಿ, ಭೀಮಸಿಂಗ ರಾಠೋಡ, ಶ್ರೀಪತಿ ಉಡುಪಿ, ವಸಂತ ಮೇಟಿ, ಉಮೇಶ ಮಲ್ಲಾಪೂರ, ಹೇಮಗಿರೀಶ್ ಹಾವಿನಾಳ, ಸೋಮಶೇಖರ್ ಚರೇದ, ಮಹೇಶ ಮುಸ್ಕಿನಭಾವಿ, ನಾಗನಗೌಡ ತಿಮ್ಮನಗೌಡ್ರ, ಅಂದಪ್ಪ ಹಾರೂಗೇರಿ, ಅಶೋಕ ನವಲಗುಂದ, ರವಿ ದಂಡಿನ, ಚಂದ್ರು ತಡಸದ, ರಾಘವೇಂದ್ರ ಯಳವತ್ತಿ, ಮಂಜುನಾಥ ಮುಳಗುಂದ, ನಿರ್ಮಲಾ ಕೊಳ್ಳಿ, ವಿಜಯಲಕ್ಷ್ಮೀ ಮಾನ್ವಿ, ಸ್ವಾತಿ ಅಕ್ಕಿ, ಕವಿತಾ ಬಂಗಾರಿ, ಜಯಶ್ರೀ ಅಣ್ಣಿಗೇರಿ, ವಿಜಯಲಕ್ಷ್ಮೀ ಶಶಿಧರ ದಿಂಡೂರ, ಲಕ್ಷ್ಮೀ ಶಂಕರ ಕಾಕಿ, ಶಿವು ಹಿರೇಮನಿಪಾಟೀಲ, ಯೋಗೇಶ್ವರಿ ಭಾವಿಕಟ್ಟಿ, ಅಪ್ಪಣ್ಣ ಟೆಂಗಿನಕಾಯಿ ನಾಗರಾಜ ತಳವಾರ, ಬಸವರಾಜ ಇಟಗಿ, ರಮೇಶ ವಕ್ಕಾರ, ವಾಯ್.ಪಿ. ಅಡ್ನೂರ, ನಿಂಗಪ್ಪ ಮಣ್ಣೂರ, ಬಸವರಾಜ ಬಡಿಗೇರ, ರೇಖಾ ಬಂಗಾರಶೆಟ್ಟರ ಮುಂತಾದದವರು ಉಪಸ್ಥಿತರಿದ್ದರು.

> ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ವಿಧಾನ ಪರಿಷತ್ ಸದಸ್ಯ ಎಸ್.ವ್ಹಿ. ಸಂಕನೂರ, ಅಲ್ಪಸಂಖ್ಯಾತರ ತುಷ್ಟೀಕರಣ ಮತ್ತು ಗುತ್ತಿಗೆಯಲ್ಲಿ ಅವರಿಗೆ ಮೀಸಲಾತಿ ನೀಡುವದು ಸಂವಿಧಾನಬದ್ಧವಾಗಿಲ್ಲ. ಸಂವಿಧಾನದಲ್ಲಿ ಧರ್ಮ ಆಧಾರಿತ ಮೀಸಲಾತಿಗೆ ಅವಕಾಶವಿಲ್ಲ ಎಂದರು.

### ಬೀದಿ ಬದಿ ವ್ಯಾಪಾರಿಗಳ ಹಣ ದುರ್ಬಳಕೆ ಆರೋಪ । ಭಾಷಾಸಾಬ್ ಮಲ್ಲಸಮುದ್ರ ನೇತೃತ್ವದಲ್ಲಿ ಹೋರಾಟ

# ಕೌಶಲ್ಯಾಭಿವೃದ್ಧಿ ಅಧಿಕಾರಿಯನ್ನು ಅಮಾನತುಗೊಳಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ 9 ಸ್ಥಳೀಯ ಸಂಸ್ಥೆಗಳ ಕಾನೂನುಗಳನ್ನು ಹಾಗೂ ಕೇಂದ್ರ ಸರ್ಕಾರದ ಆದೇಶ ಪಾಲಿಸದ ಕೌಶಲ್ಯಾಭಿವೃದ್ಧಿ ಅಧಿಕಾರಿಗಳನ್ನು ಅಮಾನತು ಮಾಡಬೇಕು ಹಾಗೂ ನಗರಸಭೆ ಪೌರಾಯುಕ್ತರು, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಯ ಮುಖ್ಯ ಅಧಿಕಾರಿಗಳನ್ನು ಸೇವೆಯಿಂದ ವಜಾಗೊಳಿಸಬೇಕು ಎಂದು ಆಗ್ರಹಿಸಿ ಬೀದಿ ಬದಿ ವ್ಯಾಪಾರಸ್ಥರ ರಾಜ್ಯ ಉಪಾಧ್ಯಕ್ಷ ಭಾಷಾಸಾಬ್ ಮಲ್ಲಸಮುದ್ರ ನೇತೃತ್ವದಲ್ಲಿ ಮಂಗಳವಾರ ಹುಬ್ಬಳ್ಳಿ–ಗದಗ ರಸ್ತೆ ತಡೆದು ಪ್ರತಿಭಟನೆ ನಡೆಸಿದರು.

> ಬೀದಿ ವ್ಯಾಪಾರಿಗಳಿಗೆ ಪಿಎಂ ಸ್ವನಿಧಿ ಫಲಾನುಭವಿಗಳ ಆಯ್ಕೆಗೆ ಸಮಿತಿ ರಚಿಸದೇ, ನೇರವಾಗಿ ಖೊಟ್ಟಿ ಫಲಾನುಭವಿಗಳಿಗೆ ಶಿಫಾರಸ್ಸು ಮಾಡಿದ್ದು ಖಂಡನೀಯ. ಅಲ್ಲದೇ, ಸರ್ಕಾರದಿಂದ ಬಂದ ಹಣವನ್ನು ಬಳಕೆ ಮಾಡದೆ ಅಧಿಕಾರಿಗಳು ಹಿಂದಿರುಗಿಸಿದ್ದಾರೆ. ಇವರಿಗೆ ಬೀದಿ ವ್ಯಾಪಾರಿಗಳ ಬಗ್ಗೆ ಸ್ವಲ್ಪವೂ ಕಾಳಜಿ ಇಲ್ಲದಂತಾಗಿದ್ದು, ಇಂತಹ ಭ್ರಷ್ಟ ಅಧಿಕಾರಿಗಳಿಂದ ಬಡವರು ಬಡವರಾಗಿಯೇ ಬದುಕುತ್ತಿದ್ದಾರೆ.
>
> – ಭಾಷಾಸಾಬ್ ಮಲ್ಲಸಮುದ್ರ.
> ಬೀದಿ ಬದಿ ವ್ಯಾಪಾರಸ್ಥರ ಸಂಘದ




ಈ ವೇಳೆ ಮಾತನಾಡಿದ ಭಾಷಾಸಾಬ್, ಗದಗ ಜಿಲ್ಲೆಯಲ್ಲಿ ಕಳೆದ ಐದು ವರ್ಷಗಳಲ್ಲಿ 9 ಸ್ಥಳೀಯ ಸಂಸ್ಥೆಗಳ (ಟಿ.ವಿ.ಸಿ) ಪಟ್ಟಣ ಮಾರಾಟ ಸಮಿತಿಯ ಅಧ್ಯಕ್ಷರುಗಳಾದ ಪೌರಾಯುಕ್ತರು ಅಥವಾ ಮುಖ್ಯಧಿಕಾರಿಗಳು ಹಾಗೂ ಕಾರ್ಯದರ್ಶಿಗಳಾದ C.A.O ಗಳು ಹಾಗೂ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಸರ್ಕಾರದ ಆದೇಶ ಹಾಗೂ ಕೇಂದ್ರ ಸರ್ಕಾರದ ಕಾಯ್ದೆ ಉಲ್ಲಂಘಿಸಿ ಅಧಿಕಾರ ದುರ್ಬಳಕೆ ಮಾಡಿಕೊಂಡು ಬೀದಿ ವ್ಯಾಪಾರಿಗಳಿಗೆ ಅನ್ಯಾಯವೆಸಗಿದ್ದಾರೆ ಎಂದು ಆರೋಪಿಸಿದರು.


ಅಧಿಕಾರಿಗಳು ಮನಬಂದಂತೆ ದುರಾಡಳಿತ ನಡೆಸಿದ್ದು, ಜಿಲ್ಲಾಧಿಕಾರಿಗಳು ಎಲ್ಲಾ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ಹಾಗೂ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳನ್ನು ಅಮಾನತು ಮಾಡಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರಲ್ಲದೆ, ಜಿಲ್ಲೆಯಾದ್ಯಂತ ಇರುವ ಬೀದಿಬದಿ ವ್ಯಾಪಾರಿಗಳ ಶುಲ್ಕ ಸಂಗ್ರಹಣೆಯಲ್ಲಿಯೂ ಕೂಡ ಭ್ರಷ್ಟಾಚಾರ ನಡೆಯುತ್ತಿದೆ. ಇದರಲ್ಲಿ ಎಲ್ಲ ಅಧಿಕಾರಿಗಳು ಶಾಮೀಲಾದಂತಿದೆ ಎಂದು ಭಾಷಾಸಾಬ್ ಮಲ್ಲಸಮುದ್ರ ಆರೋಪಿಸಿದರು.

ಈ ವೇಳೆ ಜಯ ಕರ್ನಾಟಕ ಸಂಘಟನೆಯ ರಾಜ್ಯ ಪ್ರ. ಕಾರ್ಯದರ್ಶಿ ಚಂದ್ರಕಾಂತ್ ಚೌವ್ಹಾಣ್, ಮುಕ್ತುಂಸಾಬ್ ನಾಲಬಂದ, ಬಸವರಾಜ ತಾವರೆ, ಮಂಜುನಾಥ ಹೊಗೆಸೊಪ್ಪಿನ, ಆನಂದ ಕೋಳಿ, ಭೀಮಣ್ಣ ಕೋಳಿ, ಹನುಮಂತಪ್ಪ ರೋಣ, ಮಹಮ್ಮದ್ ಅಕ್ಕಿ, ಶಿವಾನಂದ ಹೂಗಾರ, ರಷೀದಾ ನದಾಫ್, ರೇಣುಕಾ ಹತ್ತಿವಾಲೇರ, ರಾಮವ್ವ ಲಮಾಣಿ, ಗಂಗವ್ವ ಹರಿಹರ, ಕುತಿಜಾ ದೊಡ್ಡಮನಿ ಮುಂತಾದವರು ಉಪಸ್ಥಿತರಿದ್ದರು.

> ಯೋಜನಾ ನಿರ್ದೇಶಕರ ಬಸವರಾಜ ಕೊಟ್ಟೂರು ಮಾತನಾಡಿ, ಬೀದಿ ಬದಿ ವ್ಯಾಪಾರಸ್ಥರ 27 ಬೇಡಿಕೆಗಳನ್ನು ಅಜೆಂಡಾ ರೂಪದಲ್ಲಿ ಪಡೆದು, ಜಿಲ್ಲೆಯ 9 ಸ್ಥಳೀಯ ಸಂಸ್ಥೆಗಳ ಸಿ.ಓ ಹಾಗೂ ಸಿ.ಎ.ಓಗಳನ್ನು ಕರೆದು, ಮಾರ್ಚ್ 26ರಂದು ಸಾಯಂಕಾಲ 4 ಗಂಟೆಗೆ ಬೀದಿ ವ್ಯಾಪಾರಿಗಳ ಮುಖಂಡರ ಜೊತೆ ಸಭೆ ನಡೆಸಿ ಸಮಸ್ಯೆಗಳನ್ನು ಬಗೆಹರಿಸಲು ತೀರ್ಮಾನಿಸಲಾಗಿದೆ ಎಂದರು.

## ‘ಹಳೆಗನ್ನಡ ಓದು’ ಕಾರ್ಯಾಗಾರ ನಾಳೆ

■ ವಿಜಯಸಾಕ್ಷಿ ಸುದ್ದಿ, ಧಾರವಾಡ



ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಡಿಯಲ್ಲಿ ಬರುವ ಡಾ. ಎಂ.ಎಂ. ಕಲಬುರ್ಗಿ ರಾಷ್ಟ್ರೀಯ ಪ್ರತಿಷ್ಠಾನ ಧಾರವಾಡ ಹಾಗೂ ಧಾರವಾಡದ ಸರ್ಕಾರಿ ಪ್ರಥಮದರ್ಜೆ ಮಹಿಳಾ ಕಾಲೇಜಿನ ಐ.ಕ್ಯೂ.ಎ.ಸಿ ಸಂಯುಕ್ತಾಶ್ರಯದಲ್ಲಿ ಹಾಗೂ ಕನ್ನಡ ವಿಭಾಗದ ನೇತೃತ್ವದಲ್ಲಿ ಮಾರ್ಚ್ 27ರಂದು ‘ಹಳೆಗನ್ನಡ ಓದು’ ಪದವಿ ಪಠ್ಯಾಧಾರಿತ ರಾಷ್ಟ್ರಮಟ್ಟದ ಕಾರ್ಯಾಗಾರವನ್ನು ಕರ್ನಾಟಕ ಕುಲಪುರೋಹಿತ ಆಲೂರ ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಏರ್ಪಡಿಸಲಾಗಿದೆ.

ವಿಶ್ರಾಂತ ಪ್ರಾಧ್ಯಾಪಕರಾದ ಡಾ. ಶಾಂತಿನಾಥ ದಿಬ್ಬದ ಮತ್ತು ಪ್ರತಿಷ್ಠಾನದ ಸದಸ್ಯರಾದ ಹನುಮಾಕ್ಷಿ ಗೋಗಿ ಅವರು ‘ಹಳೆಗನ್ನಡ ಓದು’ ಪದವಿ ಪಠ್ಯಾಧಾರಿತ ರಾಷ್ಟ್ರಮಟ್ಟದ ಕಾರ್ಯಾಗಾರದಲ್ಲಿ ಪ್ರಬಂಧವನ್ನು ಮಂಡಿಸುವರು. ಹುಬ್ಬಳ್ಳಿ–ಧಾರವಾಡ(ಪಶ್ಚಿಮ) ಶಾಸಕ ಹಾಗೂ ಕಾಲೇಜು ಅಭಿವೃದ್ಧಿ ಸಮಿತಿಯ ಅಧ್ಯಕ್ಷರಾದ ಅರವಿಂದ ಚಂದ್ರಕಾಂತ ಬೆಲ್ಲದ ಕಾರ್ಯಕ್ರಮವನ್ನು ಉದ್ಘಾಟಿಸುವರು. ಪ್ರತಿಷ್ಠಾನದ ಸದಸ್ಯರಾದ ಶಶಿಧರ ತೆ–ೂೀಡಕರ ಪ್ರಾಸ್ತಾವಿಕ ನುಡಿಗಳನ್ನಾಡುವರು.

ಅಧ್ಯಕ್ಷತೆಯನ್ನು ಸರ್ಕಾರಿ ಪ್ರಥಮದರ್ಜೆ ಮಹಿಳಾ ಕಾಲೇಜಿನ ಪ್ರಾಚಾರ್ಯರಾದ ಡಾ. ಎಸ್.ಎಸ್. ಅಂಗಡಿ ವಹಿಸಿಕೊಳ್ಳಲಿದ್ದಾರೆ. ಐ.ಕ್ಯೂ.ಎ.ಸಿ ಸಂಚಾಲಕರಾದ ವ್ಯಾಪಾರಿ ಮಧುಸೂಧನ ಕೆ. ಉಪಸ್ಥಿತರಿರುವರು.

ಸಂಶೋಧಕರು, ಸಾಹಿತಿಗಳು, ಗಣ್ಯರು, ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕೆಂದು ಪ್ರಕಟಣೆ ತಿಳಿಸಿದೆ.

## ನಾಳೆ ವಿದ್ಯುತ್ ವ್ಯತ್ಯಯ

■ ವಿಜಯಸಾಕ್ಷಿ ಸುದ್ದಿ, ಗದಗ

110 ಕೆವ್ಹಿ ಸಂಭಾಪೂರ ರಸ್ತೆ ಗದಗ ಉಪ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕೆಲಸ ಕೈಗೊಳ್ಳುವುದರಿಂದ ಮಾರ್ಚ್ 27ರಂದು ಬೆಳಿಗ್ಗೆ 10 ಗಂಟೆಯಿಂದ ಸಾಯಂಕಾಲ 6 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ. ಮೇಲ್ಕಂಡ ಉಪಕೇಂದ್ರದಿಂದ ವಿದ್ಯುತ್ ಪೂರೈಕೆಯಾಗುತ್ತಿರುವ ವಿವೇಕಾನಂದ ನಗರ, ಹೊಸ ಬಸ್‌ಸ್ಟ್ಯಾಂಡ್, ಪಂಚಾಕ್ಷರಿ ನಗರ, ರಾಜೀವಗಾಂಧಿ ನಗರ, ಬುರುಬುರೆ ಪ್ಲಾಟ್, ಆನಂದಾಶ್ರಮ ರಸ್ತೆ, ಜೆ.ಟಿ. ಕಾಲೇಜ್ ರಸ್ತೆ, ಹಾತಲಗೇರಿ ಎನ್.ಜೆ.ವೈ ಹಾಗೂ ಇ.ಐ.ಪಿ ಫೀಡರ್‌ಗಳ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕೆಂದು ಹೆಸ್ಕಾಂ ಪ್ರಕಟಣೆ ತಿಳಿಸಿದೆ.

### ಡಾ. ಬಾಬು ಜಗಜೀವನರಾಮ್, ಡಾ. ಅಂಬೇಡ್ಕರ್ ಜಯಂತಿ ಕುರಿತು ಪೂರ್ವಭಾವಿ ಸಭೆ

# ಜಯಂತಿ ಕಾರ್ಯಕ್ರಮ ಅರ್ಥಪೂರ್ಣವಾಗಿರಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಎಪ್ರಿಲ್ 5ರಂದು ಹಸಿರುಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನರಾಮ್ ಅವರ 118ನೇ ಜನ್ಮ ದಿನಾಚರಣೆ ಹಾಗೂ ಏಪ್ರಿಲ್ 14ರಂದು ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 134ನೇ ಜನ್ಮ ದಿನಾಚರಣೆಯನ್ನು ಆಚರಿಸಲಾಗುತ್ತಿದ್ದು, ಜಯಂತಿಯ ಅರ್ಥಪೂರ್ಣ ಹಾಗೂ ವ್ಯವಸ್ಥಿತ ಆಚರಣೆಗೆ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು. ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಮಂಗಳವಾರ ಜರುಗಿದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕಾರ್ಯಕ್ರಮಕ್ಕೂ ಮುನ್ನ ಕಲಾ ತಂಡಗಳೊಂದಿಗೆ ವ್ಯವಸ್ಥಿತ ಮೆರವಣಿಗೆ ಜರುಗಬೇಕು. ಜಯಂತಿ ಕಾರ್ಯಕ್ರಮದಲ್ಲಿ ಉಪನ್ಯಾಸಕರ ಆಯ್ಕೆ, ಪ್ರತಿಭಾವಂತ ವಿದ್ಯಾರ್ಥಿಗಳ ಸನ್ಮಾನ, ವೇದಿಕೆ ಕಾರ್ಯಕ್ರಮ ಅಚ್ಚುಕಟ್ಟಾಗಿ ನಿರ್ವಹಿಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿಗಳು ಸೂಚಿಸಿದರು. ಇದೇ ಸಂದರ್ಭದಲ್ಲಿ ಅಂಬೇಡ್ಕರ್ ಜಯಂತಿ ಪ್ರಯುಕ್ತ ಫ್ಲೆಕ್ಸ್ ಬೋರ್ಡ್ ಅಳವಡಿಕೆ, ಕಾರ್ಯಕ್ರಮದಲ್ಲಿ ಪೌರಕಾರ್ಮಿಕರು, ಆಶಾ ಕಾರ್ಯಕರ್ತೆಯರು, ಮಹಿಳಾ ಸಂಘಟನೆಗಳು, ಶಾಲಾ–ಕಾಲೇಜು ವಿದ್ಯಾರ್ಥಿಗಳು, ವಿವಿಧ ಸಂಘ–ಸಂಸ್ಥೆಗಳ ಹಾಗೂ ಸಮುದಾಯಗಳ ಪಾಲ್ಗೊಳ್ಳುವಿಕೆ, ಮಕ್ಕಳಿಗೆ ವಿವಿಧ ವೇಷ ಭೂಷಣ ಕಾರ್ಯಕ್ರಮ ಆಯೋಜನೆ, ಸಾಂಸ್ಕೃತಿಕ ಕಾರ್ಯಕ್ರಮಗಳ ಆಯೋಜನೆ ಹಾಗೂ ನಗರದ ವಿವಿಧ ವೃತ್ತಗಳಿಗೆ ದೀಪಾಲಂಕಾರ ವ್ಯವಸ್ಥೆ, ಎನ್.ಜಿ.ಓ, ಎನ್.ಎಸ್.ಎಸ್., ಎನ್.ಸಿಸಿ ಸಂಘಟನೆಗಳ ಭಾಗವಹಿಸುವಿಕೆ, ರೈತರು ಸೇರಿದಂತೆ ಗ್ರಾಮೀಣ ಪ್ರದೇಶಗಳಲ್ಲಿನ ಜನರು ಕಾರ್ಯಕ್ರಮಕ್ಕೆ ಹಾಜರಾಗುವ ಕುರಿತು ಹಾಗೂ ಪ್ರಾಥಮಿಕ ಮತ್ತು ಪ್ರೌಢಶಾಲಾ ಮಕ್ಕಳಿಗೆ ಡಾ. ಬಿ.ಆರ್. ಅಂಬೇಡ್ಕರ್ ಅವರ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳ ಆಯೋಜನೆ, ಹಾಸ್ಟೆಲ್ ವಿದ್ಯಾರ್ಥಿಗಳು ಹಾಗೂ ಮಾಜಿ ಸೈನಿಕರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸುವ ಕುರಿತು ವಿವಿಧ ಸಂಘಟನೆಗಳು, ಸಮುದಾಯಗಳ ಮುಖಂಡರು ತಮ್ಮ ಸಲಹೆ–ಸೂಚನೆಗಳನ್ನು ಸಭೆಯ ಗಮನಕ್ಕೆ ತಂದರು. ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ ಸರ್ವರನ್ನು ಸ್ವಾಗತಿಸಿ ವಂದಿಸಿದರು. ಸಭೆಯಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ತಹಸೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ವಿವಿಧ ಇಲಾಖೆ ಅಧಿಕಾರಿಗಳು, ಸಂಸ್ಥೆಗಳ, ಸಮುದಾಯದ ಮುಖ್ಯಸ್ಥರು, ಗಣ್ಯರು, ಹಿರಿಯರು ಹಾಜರಿದ್ದರು.



> ಏಪ್ರಿಲ್ 5ರಂದು ಹಸಿರುಕ್ರಾಂತಿ ಹರಿಕಾರ ಡಾ. ಬಾಬು ಜಗಜೀವನರಾಮ್ ಅವರ ಜಯಂತಿಯನ್ನು ಜಿಲ್ಲಾಡಳಿತದಿಂದ ಸಾಂಕೇತಿಕವಾಗಿ ಆಡಿಟೋರಿಯಂ ಹಾಲ್‌ನಲ್ಲಿ ಆಚರಿಸಲಾಗುವುದು. ಏಪ್ರಿಲ್ 14ರಂದು ಜಿಲ್ಲಾಡಳಿತದಿಂದ ವಿವಿಧ ಸಂಘಟನೆಗಳೊಂದಿಗೆ ನಗರದ ಅಂಬೇಡ್ಕರ್ ಸಮುದಾಯ ಭವನದಲ್ಲಿ ಅಂಬೇಡ್ಕರ್ ಜಯಂತಿಯನ್ನು ಆಚರಿಸಲಾಗುವುದು. ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಕುರಿತು ಶಾಲಾ ಮಕ್ಕಳಿಗೆ ಪ್ರಬಂಧ ಸ್ಪರ್ಧೆಗಳನ್ನು ಆಯೋಜಿಸಲು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

## ಸಂಪಾದಕೀಯ

### ಒಳ ಮೀಸಲಾತಿ ವಿಳಂಬಕ್ಕೆ ಕಾರಣವಾಗದಿರಲಿ

ರಾಜ್ಯ ಸರ್ಕಾರ ಒಳ ಮೀಸಲಾತಿ ಜಾರಿ ವಿಷಯವಾಗಿ ಪ್ರಮುಖ ನಿರ್ಧಾರವನ್ನು ಪ್ರಕಟಿಸಿದೆ. ನಾಗಮೋಹನ ದಾಸ್ ನೇತೃತ್ವದ ಸಮಿತಿ ಒಳ ಮೀಸಲಾತಿಯ ವರದಿ ನೀಡಿ, ಸರ್ಕಾರ ಅದಕ್ಕೆ ಸೂಕ್ತ ನಿರ್ಧಾರ ಕೈಗೊಳ್ಳುವವರೆಗೆ ನೇಮಕಾತಿ ಮತ್ತು ಬಡ್ತಿ ನೀಡುವುದಿಲ್ಲ ಎಂದು ನಿರ್ಧಾರವನ್ನು ಪ್ರಕಟಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಈ ನಿರ್ಧಾರವನ್ನು ತಿಳಿಸಿದ್ದು, ವಾರದೊಳಗಾಗಿ ಒಳ ಮೀಸಲಾತಿ ಕುರಿತಂತೆ ಮಧ್ಯಂತರ ವರದಿ ಸಲ್ಲಿಸುವಂತೆ ನಾಗ ಮೋಹನದಾಸ ಸಮಿತಿಗೆ ಸೂಚನೆಯನ್ನು ನೀಡಿದೆ. ಮಧ್ಯಂತರ ವರದಿಯ ನಂತರ ತಿಂಗಳೊಳಗೆ ಸಂಪೂರ್ಣ ವರದಿ ನೀಡುವಂತೆಯೂ ಸರ್ಕಾರ ಸೂಚಿಸಿರುವುದು, ಒಳ ಮೀಸಲಾತಿ ಜಾರಿ ವಿಷಯದಲ್ಲಿ ಸರ್ಕಾರ ಗಂಭೀರವಾಗಿರುವುದನ್ನು ಸೂಚಿಸುತ್ತದೆ.

ಆದರೆ ಒಳ ಮೀಸಲಾತಿ ವಿಷಯ ರಾಜಕೀಯ ಅಸ್ತ್ರವಾಗಿ ವರ್ಷಗಳಿಂದ ಜಾರಿಯಾಗದೆ ನನಗುದಿಗೆ ಬೀಳುತ್ತಿದೆ. ಸದ್ಯ ಕೆಲವು ರಾಜ್ಯಗಳಲ್ಲಿ ಒಳ ಮೀಸಲಾತಿ ಜಾರಿಯಾದಗಿನಿಂದ, ಕರ್ನಾಟಕದಲ್ಲಿಯೂ ಒಳ ಮೀಸಲಾತಿ ಜಾರಿಗೆ ಒತ್ತಡಗಳು ಹೆಚ್ಚಾಗುತ್ತಿವೆ.

ಈ ಸಂಬಂಧ ಸರ್ಕಾರ ಗಂಭೀರವಾಗಿ ಒಳ ಮೀಸಲಾತಿ ಬಗ್ಗೆ ಚರ್ಚೆ ಆರಂಭಿಸಿರುವುದು ಶುಭ ಸೂಚಕ. ಆದರೆ ಇದೇ ವಿಷಯವನ್ನ ಮುಂದಿಟ್ಟುಕೊಂಡು ಸರ್ಕಾರದ ನೇಮಕಾತಿಗಳನ್ನು ಮುಂದೂಡುವುದು, ಬಡ್ತಿ ತಡೆಹಿಡಿಯುವುದು ಅಷ್ಟು ಸರಿಯಾದ ಕ್ರಮ ಅಲ್ಲ.

ಈಗಾಗಲೇ ಅನೇಕ ನೇಮಕಾತಿ ಪ್ರಕ್ರಿಯೆಗಳು ಅಕ್ರಮಕ್ಕೆ ಬಲಿಯಾಗಿ ಲಕ್ಷಾಂತರ ಜನ ಉದ್ಯೋಗಾಕಾಂಕ್ಷಿಗಳ ಆಸೆಗೆ ತಣ್ಣೀರು ಎರಚಿಸಿದೆ. ಇಂತಹ ಸಂದಿಗ್ಧ ಪರಿಸ್ಥಿತಿಯಲ್ಲಿ ಒಳ ಮೀಸಲಾತಿ ವರದಿ ಕುರಿತಾಗಿ ನಿರ್ಧಾರ ಕೈಗೊಳ್ಳುವವರಿಗೆ, ಯಾವುದೇ ನೇಮಕಾತಿ ಬಡ್ತಿ ಮಾಡಿಕೊಳ್ಳದೆ ಇರುವುದು ಸರಿಯಾದ ನಿರ್ಧಾರ ಅಲ್ಲ. ಒಂದು ವೇಳೆ ಸರ್ಕಾರ ತನ್ನ ನಿರ್ಧಾರ ಸರಿಯಾಗಿದೆ ಎನ್ನುವುದಾದರೆ, ವಿಳಂಬಕ್ಕೆ ಅವಕಾಶ ನೀಡದಂತೆ ಒಳಮಿಸಲಾತಿಯ ವರದಿಯನ್ನು ಪಡೆದು ಕ್ರಮ ಕೈಗೊಳ್ಳಬೇಕು. ಒಳ ಮೀಸಲಾತಿಯ ವಿಷಯ ಯಾವುದೇ ಕಾರಣಕ್ಕೂ ವಿಳಂಬಕ್ಕೆ ಕಾರಣವಾಗದಿದ್ದರೆ ಅಷ್ಟೆ ಸಾಕು.

## ಭಗವಾನ್ ಮಹಾವೀರ ಜಯಂತಿ: ಇಂದು ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ಎಪ್ರಿಲ್ 10 ರಂದು ಆಚರಿಸಲಾಗುವ ಶ್ರೀ ಭಗವಾನ್ ಮಹಾವೀರ ಜಯಂತಿ ನಿಮಿತ್ತ ಎಪ್ರಿಲ್ 26 ರ ಸಂಜೆ 4 ಗಂಟೆಗೆ ಅಪರ ಜಿಲ್ಲಾಧಿಕಾರಿಗಳು, ಗದಗ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ. ಸಭೆಗೆ ಹಾಜರಾಗಿ ಸಲಹೆ/ ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಎಫ್‌ಎಕ್ಯೂ ಗುಣಮಟ್ಟದ ಬಿಳಿ ಜೋಳ ಕೃಷಿ ಹುಟ್ಟುವಳಿ ಖರೀದಿಗೆ ಬೆಂಬಲ ಬೆಲೆ ನಿಗದಿ**

# ಎಪ್ರಿಲ್ 1ರಿಂದ ಬಿಳಿ ಜೋಳ ಖರೀದಿ ಆರಂಭ

■ವಿಜಯಸಾಕ್ಷಿ ಸುದ್ದಿ, ಗದಗ

2024–2025ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ರೈತರಿಂದ ಎಫ್.ಎ.ಕ್ಯೂ ಗುಣಮಟ್ಟದ ಬಿಳಿಜೋಳ ಉತ್ಪನ್ನವನ್ನು ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ನೋಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಸಭಾಭವನದಲ್ಲಿ ಸೋಮವಾರ 2024–25ನೇ ಸಾಲಿನ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಬಿಳಿ ಜೋಳ ಉತ್ಪನ್ನವನ್ನು ಖರೀದಿಸುವ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ವಿನೋದಕುಮಾರ್ ಹೆಗ್ಗಳಗಿ ಮಾತನಾಡಿ, ಎಫ್.ಎ.ಕ್ಯೂ ಗುಣಮಟ್ಟದ ಬಿಳಿ ಜೋಳ ಹುಟ್ಟುವಳಿಗೆ ಜೋಳ–ಹೈಬ್ರೀಡ್ ಪ್ರತಿ ಕ್ವಿಂಟಲ್‌ಗೆ ರೂ. 3371, ಜೋಳ–ಮಾಲ್ದಂಡಿ ಪ್ರತಿ ಕ್ವಿಂಟಲ್‌ಗೆ ರೂ. 3421ರಂತೆ ನಿಗದಿಪಡಿಸಲಾಗಿದೆ. ಕೇಂದ್ರ ಸರ್ಕಾರದ ಆದೇಶದನುಸಾರ ಗದಗ ಜಿಲ್ಲೆಗೆ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ (ಮಾರ್ಕ್‌ಫೆಡ್) ಸಂಸ್ಥೆಯನ್ನು ರಾಜ್ಯದ ವತಿಯಿಂದ ಖರೀದಿ ಸಂಸ್ಥೆಯನ್ನಾಗಿ ನೇಮಿಸಿದೆ ಎಂದರು.

ಬೆಂಬಲ ಬೆಲೆ ಖರೀದಿ ಮಾರ್ಗಸೂಚಿಗಳನ್ವಯ ಜೋಳ ಉತ್ಪನ್ನ ಖರೀದಿ ನೋಂದಣಿ ಮಾರ್ಚ್ 25ರಿಂದ ಕೈಗೊಳ್ಳಲು ಹಾಗೂ ಎಪ್ರಿಲ್ 1ರಿಂದ ಮೇ 31ರವರೆಗೆ ಖರೀದಿ ಕಾರ್ಯ



ಕೈಗೊಳ್ಳುವುದು ಎಂದು ಸೂಚಿಸಲಾಯಿತು. ಸರ್ಕಾರದಿಂದ ನೇಮಿಸಲ್ಪಟ್ಟ ಖರೀದಿ ಏಜೆನ್ಸಿ ಬಿಳಿ ಜೋಳ ಖರೀದಿ ಹಂತದಲ್ಲಿ ಕೇಂದ್ರ ಸರ್ಕಾರವು ನಿಗದಿಪಡಿಸಿದ ಮಾನದಂಡಗಳನ್ವಯ ಜೋಳವನ್ನು ಪ್ರತಿ ರೈತರಿಂದ ಪ್ರತಿ ಎಕರೆಗೆ 20 ಕ್ವಿಂಟಲ್‌ನಂತೆ ಗರಿಷ್ಠ 150 ಕ್ವಿಂಟಲ್ ಖರೀದಿಸಲು ಸೂಚಿಸಲಾಯಿತು.

ಕೇಂದ್ರ ಸರ್ಕಾರದ ಬೆಂಬಲ ಬೆಲೆ ಖರೀದಿ ಮಾರ್ಗಸೂಚಿಗಳನ್ವಯ ಜಿಲ್ಲೆಯಲ್ಲಿ ಬಿಳಿ ಜೋಳ ಉತ್ಪನವನ್ನು ಗದಗ ಎಪಿಎಂಸಿ ಮಾರುಕಟ್ಟೆ ಪ್ರಾಂಗಣ, ಲಕ್ಷ್ಮೇಶ್ವರ ಎಪಿಎಂಸಿ ಮಾರುಕಟ್ಟೆ ಪ್ರಾಂಗಣ, ಮುಂಡರಗಿ ಎಪಿಎಂಸಿ ಮಾರುಕಟ್ಟೆ ಪ್ರಾಂಗಣ, ರೋಣ ಎಪಿಎಂಸಿ ಮಾರುಕಟ್ಟೆ ಪ್ರಾಂಗಣಗಳಲ್ಲಿ ಖರೀದಿಸಲು ತೀರ್ಮಾನಿಸಲಾಯಿತು.

ಸಭೆಯಲ್ಲಿ ಕೃಷಿ ಇಲಾಖೆ, ತೋಟಗಾರಿಕೆ ಇಲಾಖೆ, ಕೃಷಿ ಮಾರಾಟ ಇಲಾಖೆ, ಕೆ.ಎಫ್.ಸಿ.ಎಸ್.ಸಿ, ಮಾರ್ಕೆಟಿಂಗ್ ಫೆಡರೇಶನ್ ಗದಗ, ನರಗುಂದ ಹಾಗೂ ಗದಗ, ಕಾನೂನು ಮಾಪನ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

> ಸರ್ಕಾರದ ಮಾನದಂಡಗಳನ್ವಯ ಎಫ್.ಎ.ಕ್ಯೂ ಗುಣಮಟ್ಟವನ್ನು ದೃಢೀಕರಿಸಲು ಕ್ರಮ ವಹಿಸಬೇಕು. ಖರೀದಿ ಏಜೆನ್ಸಿಯವರು ತಮ್ಮ ಸಂಸ್ಥೆಯ ಹಿರಿಯ ಅಧಿಕಾರಿಗಳು ಮೇಲುಸ್ತುವಾರಿ ತಪಾಸಣೆ ಕೈಗೊಳ್ಳಬೇಕು. ಪ್ರತಿ ಖರೀದಿ ಕೇಂದ್ರಕ್ಕೆ ಗ್ರೇಡರ್‌ಗಳನ್ನು ನೇಮಿಸಬೇಕು. ಎಫ್.ಎ.ಕ್ಯೂ ಗುಣಮಟ್ಟದ ಬಿಳಿ ಜೋಳ ಖರೀದಿಸಲು ಹಾಗೂ ಬಿಳಿ ಜೋಳ ಖರೀದಿ ಕೇಂದ್ರಗಳಲ್ಲಿ ರೈತರ ಹೆಸರಿನಲ್ಲಿ ವರ್ತಕರು ತರುವ ಮಹಸೀಲು ಖರೀದಿಸದಂತೆ ಹಾಗೂ ಖರೀದಿ ಸಂಸ್ಥೆಗಳು ಯಾವುದೇ ರೀತಿಯ ದುರುಪಯೋಗ ಆಗದಂತೆ ಎಲ್ಲ ಮುನ್ನೆಚ್ಚರಿಕೆ ಕ್ರಮಗಳನ್ನು ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್ ಶ್ರೀಧರ್ ಸೂಚಿಸಿದರು.

**ಧಾರವಾಡ ಜಿಲ್ಲೆಯಲ್ಲಿಯೂ ಗರಿಷ್ಠ ತಾಪಮಾನ | ಮುನ್ನೆಚ್ಚರಿಕೆ ವಹಿಸಲು ಜಿಲ್ಲಾಧಿಕಾರಿ ದಿವ್ಯ ಪ್ರಭು ಸೂಚನೆ**


# ಆರೋಗ್ಯ ಇಲಾಖೆಯ ಸೂಚನೆಗಳನ್ನು ಪಾಲಿಸಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಭಾರತೀಯ ಹವಾಮಾನ ಇಲಾಖೆಯ ಮಾಹಿತಿಯಂತೆ 2025ನೇ ಸಾಲಿನ ಬಿಸಿ ವಾತಾವರಣ ಅವಧಿಯಲ್ಲಿ ಉತ್ತರ ಒಳನಾಡು ಜಿಲ್ಲೆಗಳಲ್ಲಿ ಸಾಮಾನ್ಯಕ್ಕಿಂತ ಹೆಚ್ಚಿನ ತಾಪಮಾನದ ಸಾಧ್ಯತೆಗಳಿದ್ದು, ಬಿಸಿಗಾಳಿ ಹಾಗೂ ತಾಪಮಾನದ ಮುನ್ಸೂಚನೆಯಿದೆ. ಮುಂದಿನ ಅವಧಿಯಲ್ಲಿ ಸಾಮಾನ್ಯ ಶಾಖದ ಅಲೆಗಳ ದಿನಗಳು ಹೆಚ್ಚಾಗುವ ಸಾಧ್ಯತೆಯಿದೆ. ಶಾಖದ ಅಲೆಗಳಿಂದ ರಕ್ಷಿಸಿಕೊಳ್ಳಲು ಮಹಿಳೆಯರು, ಮಕ್ಕಳು, ವೃದ್ಧರು ಸೇರಿದಂತೆ ಎಲ್ಲ ಸಾರ್ವಜನಿಕರು ಜಾಗೃತಿವಹಿಸಿ, ಆರೋಗ್ಯ ಇಲಾಖೆಯ ಸುರಕ್ಷತಾ ಮಾರ್ಗಸೂಚಿಗಳ ಕುರಿತು ಮುನ್ನೆಚ್ಚರಿಕೆ ತೆಗೆದುಕೊಳ್ಳಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಪ್ರಸ್ತುತ ಧಾರವಾಡ ಜಿಲ್ಲೆಯಲ್ಲಿಯೂ ಸಹ 40 ಡಿಗ್ರಿ ಸೆಲ್ಸಿಯಸ್‌ಗಿಂತ ಹೆಚ್ಚು ಗರಿಷ್ಠ ತಾಪಮಾನದ ಬಗ್ಗೆ ವರದಿಯಾಗುತ್ತಿದೆ. ಆದ್ದರಿಂದ ಅತೀ ಹೆಚ್ಚು ತಾಪಮಾನದಿಂದ ಆಗುವ ಪ್ರತಿಕೂಲ ಪರಿಣಾಮವನ್ನು ತಡೆಗಟ್ಟಲು ಆರೋಗ್ಯ ಇಲಾಖೆ ನೀಡಿದ ಸಲಹೆ–ಸೂಚನೆಗಳನ್ನು ಜಿಲ್ಲೆಯ ಸಾರ್ವಜನಿಕರು ಪಾಲಿಸಬೇಕೆಂದು ಅವರು ತಿಳಿಸಿದ್ದಾರೆ.

ಗರಿಷ್ಠ ತಾಪಮಾನ ಇರುವ ಮಧ್ಯಾಹ್ನ 12ರಿಂದ 3 ಗಂಟೆವರೆಗಿನ ಅವಧಿಯಲ್ಲಿ ಬಿಸಿಲಿನಲ್ಲಿ ಹೋಗುವುದನ್ನು ತಪ್ಪಿಸಬೇಕು. ಬಾಯಾರಿಕೆ ಇಲ್ಲದಿದ್ದರೂ ಸಹ ಸಾಕಷ್ಟು ನೀರು ಕುಡಿಯಬೇಕು. ಹಗುರವಾದ, ತಿಳಿ ಬಣ್ಣದ ಸಡಿಲವಾದ ಮತ್ತು ಹತ್ತಿ ಬಟ್ಟೆಗಳನ್ನು ಧರಿಸಬೇಕು. ಬಿಸಿಲಿನಲ್ಲಿ ಹೋಗುವಾಗ ರಕ್ಷಣೆಗಾಗಿ ಕನ್ನಡಕಗಳು,



ಛತ್ರಿ, ಟೋಪಿ, ಬೂಟುಗಳು ಅಥವಾ ಚಪ್ಪಲಿಗಳನ್ನು ಬಳಸಬೇಕು. ಹೊರಗಿನ ಉಷ್ಣತೆಯು ಅಧಿಕವಾಗಿರುವಾಗ ಶ್ರಮದಾಯಕ ಚಟುವಟಿಕೆಗಳನ್ನು ತಪ್ಪಿಸಬೇಕು.

ಪೂರ್ವಾಹ್ನ 11 ಗಂಟೆಯಿಂದ ಸಂಜೆ 4 ಗಂಟೆಯ ಅವಧಿಯಲ್ಲಿ ಹೊರಾಂಗಣ ಸಭೆಗಳು, ಚಟುವಟಿಕೆಗಳು ನಡೆಯುವ ಪ್ರದೇಶದಲ್ಲಿ ಸಾರ್ವಜನಿಕರಿಗೆ ಬಿಸಿಲಿನಿಂದ ರಕ್ಷಣೆಯನ್ನು ನೀಡಲು ಅಗತ್ಯ ಶಾಮಿಯಾನ, ಪೆಂಡಾಲ್ ವ್ಯವಸ್ಥೆ ಮಾಡಬೇಕು. ಉತ್ತಮ ಗಾಳಿಯ ವ್ಯವಸ್ಥೆಯನ್ನು ಖಚಿತಪಡಿಸಿಕೊಳ್ಳುವುದು ಹಾಗೂ ಸಭಿಕರಿಗೆ ಕುಡಿಯುವ ನೀರಿನ ವ್ಯವಸ್ಥೆಯನ್ನು ಕಡ್ಡಾಯವಾಗಿ ಮಾಡಬೇಕು ಎಂದು ಸೂಚಿಸಿದೆ.

ಅತೀ ಹೆಚ್ಚು ತಾಪಮಾನದಿಂದ ಉದ್ಭವಿಸಬಹುದಾದ ರೋಗಲಕ್ಷಣಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆಯಿಂದ ಆಗಿಂದಾಗ್ಗೆ ನೀಡುವ ಮಾರ್ಗಸೂಚಿಗಳನ್ನು ಪಾಲಿಸಬೇಕು. ಆರೋಗ್ಯ ಇಲಾಖೆ ನೀಡಿರುವ ಎಲ್ಲ ರೀತಿಯ ಆರೋಗ್ಯ ಸುರಕ್ಷತಾ ಕ್ರಮಗಳನ್ನು ತಪ್ಪದೇ ಪಾಲಿಸಬೇಕು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

> ಅತೀ ಹೆಚ್ಚು ತಾಪಮಾನದಿಂದ ಸಾಮಾನ್ಯವಾಗಿ ನಿರ್ಜಲೀಕರಣ, ಶಾಖ ಸೆಳೆತ, ಶಾಖದ ಬಳಲಿಕೆ ಅಥವಾ ಶಾಖದ ಅಘಾತದಂತಹ (ಸನ್ ಸ್ಟ್ರೋಕ್) ಆರೋಗ್ಯದ ದುಷ್ಪರಿಣಾಮಗಳು ಉಂಟಾಗುವ ಸಾಧ್ಯತೆ ಇರುತ್ತದೆ. ಅತೀ ಹೆಚ್ಚು ತಾಪಮಾನದಿಂದ ತುತ್ತಾದ ವ್ಯಕ್ತಿಯನ್ನು ನೆರಳಿನ ಅಡಿಯಲ್ಲಿ ತಂಪಾದ ಸ್ಥಳಕ್ಕೆ ಸ್ಥಳಾಂತರಿಸಬೇಕು. ಒದ್ದೆಯಾದ ಬಟ್ಟೆಯಿಂದ ಮೈ ಒರಸುವುದು ಹಾಗೂ ದೇಹದ ಉಷ್ಣತೆಯನ್ನು ತಗ್ಗಿಸಲು ತಲೆಯ ಮೇಲೆ ನೀರನ್ನು ಹಾಕುವುದು ಹಾಗೂ ವ್ಯಕ್ತಿಗೆ ತಂಪಾದ ಗಾಳಿಯ ವ್ಯವಸ್ಥೆ ಮಾಡುವುದು ಮಾಡಬೇಕು.

**ಗುರುಭವನ, ಮಹಾದ್ವಾರ ಉದ್ಘಾಟನೆ, ಧರ್ಮ ಜಾಗೃತಿ ಸಮಾರಂಭದದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು**

# ಮಹಾತ್ಮರ ನುಡಿಗೆ ಬದುಕನ್ನು ಪರಿವರ್ತಿಸುವ ಶಕ್ತಿಯಿದೆ

■ವಿಜಯಸಾಕ್ಷಿ ಸುದ್ದಿ, ಮಳಖೇಡ

ನೀತಿ–ನಿಯತ್ತುಗಳು ಮಾನವೀಯ ಸಂಬಂಧಗಳನ್ನು ಜೋಡಿಸುತ್ತವೆ. ವಿದ್ಯೆ ವಿನಯಕ್ಕೆ ಕಾರಣವಾಗಬೇಕಲ್ಲದೇ ದುರಹಂಕಾರಕ್ಕಲ್ಲ. ಒಳ್ಳೆಯ ಮಾತಿಗೆ ಬದುಕನ್ನು ಪರಿವರ್ತಿಸುವ ಶಕ್ತಿಯಿದೆ. ಮಹಾತ್ಮರ ನುಡಿಗಳ ಪರಿಪಾಲನೆಯಿಂದ ಬದುಕು ಉಜ್ವಲಗೊಳ್ಳುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಸೋಮವಾರ ಸ್ಥಳೀಯ ಮೂಲಾಧಾರ ಸಂಸ್ಥಾನ ಬೃಹನ್ಮಠದ 24ನೇ ವರ್ಷದ ಜಾತ್ರಾ ಮಹೋತ್ಸವ ಹಾಗೂ ಗುರುಭವನ–ಮಹಾದ್ವಾರ ಉದ್ಘಾಟನೆಯ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು. ಮನುಷ್ಯ ಜೀವನ ಉತ್ಸಾಹದಿಂದ ಕೂಡಿರಬೇಕು. ಜೀವನದಲ್ಲಿ ಉತ್ಸಾಹ ಇಲ್ಲದಿದ್ದರೆ ನೆಮ್ಮದಿಯಿಲ್ಲ. ಈಶ



ನಿರ್ಮಿತವಾದ ಈ ಪ್ರಪಂಚದಲ್ಲಿ ಇರುವುದೆಲ್ಲವೂ ಅಮೂಲ್ಯ ಸಂಪತ್ತು. ಚಿನ್ನವಿಲ್ಲದೇ ಮನುಷ್ಯ ಬದುಕಬಹುದು. ಆದರೆ ಅನ್ನ ಇಲ್ಲದೇ ಬದುಕಲು ಸಾಧ್ಯವಾಗದು.

ಮಣ್ಣು, ನೀರು, ಗಾಳಿ, ಬೆಂಕಿ ಮತ್ತು ಕಲ್ಲಿನಲ್ಲಿಯೂ ದೇವರನ್ನು ಕಂಡು ಪೂಜಿಸಿದವರು ಭಾರತೀಯರು. ಮನುಷ್ಯನ ಮನಸ್ಸೆಂಬ ಚಂಚಲ ಅಲೆಗಳ ಹೊಯ್ದಾಟವನ್ನು ಪ್ರಶಾಂತಗೊಳಿಸುವ ಮಾರ್ಗವೇ ಆಧ್ಯಾತ್ಮವಾಗಿದೆ ಎಂದರು. ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಸಚಿವ ಡಾ. ಶರಣ ಪ್ರಕಾಶ ಪಾಟೀಲ ಹಾಗೂ ಶಾಸಕರು ಕೆ.ಕೆ.ಆರ್.ಡಿ.ಬಿ. ಅಧ್ಯಕ್ಷ ಡಾ.ಅಜಯ್ ಸಿಂಗ್ ಸಮಾರಂಭವನ್ನು ಜಂಟಿಯಾಗಿ ಉದ್ಘಾಟಿಸಿದರು. ಡಾ. ಶರಣ ಪ್ರಕಾಶ ಪಾಟೀಲ ಮಾತನಾಡಿ, ನಾಡು–ನುಡಿಗೆ ವೀರಶೈವ ಮಠಗಳ ಕೊಡುಗೆ ಅಪಾರ. ಸಂಸ್ಕಾರದ ಮೂಲಕ ಭಕ್ತರ ಬಾಳಿನಲ್ಲಿ ಬೆಳಕು ಮೂಡಿಸಿವೆ. ವೀರಶೈವ ಧರ್ಮದ ಪೀಠ ಮಠಗಳು ಸಮಾಜದ ಉಜ್ವಲ ಭವಿಷ್ಯಕ್ಕೆ ಶ್ರಮಿಸುತ್ತಿವೆ. ಶ್ರೀ ಜಗದ್ಗುರು ರೇಣುಕಾಚಾರ್ಯರ ವಿಚಾರ ಧಾರೆ ಮತ್ತು ಶರಣರ ಚಿಂತನೆಗಳು ಒಚಿದೇ ಆಗಿವೆಯೇ ಹೊರತು ಬೇರೆಯಲ್ಲ ಎಂದರು. ಸಮಾರಂಭದಲ್ಲಿ ಹುಡುಗಿ ಹಿರೇಮಠದ ವಿರೂಪಾಕ್ಷಲಿಂಗ ಶಿವಾಚಾರ್ಯರು, ಶ್ರೀನಿವಾಸ ಸರಡಗಿಯ ರೇವಣಸಿದ್ಧೇಶ್ವರ ಶಿವಾಚಾರ್ಯರು, ದೇವಾಪುರ–ಸ್ಟೇಷನ್ ಬಬಲಾದ ಶಿವಮೂರ್ತಿ ಶಿವಾಚಾರ್ಯರು, ಚೌಡಾಪುರ ಹಿರೇಮಠದ ರಾಜಶೇಖರ ಶಿವಾಚಾರ್ಯರು, ತೊನಸನಹಳ್ಳಿ ಎಸ್. ರೇವಣಸಿದ್ಧ ಚರಂತೇಶ್ವರ ಶಿವಾಚಾರ್ಯರು, ತೆಂಗಳಿ–ಮಂಗಲಗಿಯ ಶಾಂತಸೋಮನಾಥ ಶಿವಾಚಾರ್ಯರು, ತೊಟ್ನಳ್ಳಿ ತ್ರಿಮೂರ್ತಿ ಶಿವಾಚಾರ್ಯರು, ಮುದ್ದಡಗಾದ ಸದ್ಯೋಜಾತ ರೇಣುಕ ಶಿವಾಚಾರ್ಯರು, ಅಬ್ಬೆತುಮಕೂರಿನ ಗಂಗಾಧರ ಶಿವಾಚಾರ್ಯರು, ಗೋಕುಳದ ಘನಲಿಂಗ ದೇವರು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು. ಮುಖ್ಯ ಅತಿಥಿಗಳಾಗಿ ಗ್ರಾ.ಪಂ ಅಧ್ಯಕ್ಷ ದಿನೇಶ ಪಾಟೀಲ ಸಣ್ಣೂರು, ಶಿವಶರಣಪ್ಪ ಸೀರಿ, ಮಹಾಂತಪ್ಪ ಸಂಗಾವಿ, ರಾಜಶೇಖರ ನಿಲಂಗಿ, ಶಿವಲಿಂಗರೆಡ್ಡಿ ಬೆನಕನಹಳ್ಳಿ, ಬಸವರಾಜ ರೇವಗೊಂಡ, ಸೇಡಂನ ಶ್ರೀ ಧರ್ಮಸ್ಥಳ ಮಂಜುನಾಥ ಗ್ರಾ.ಅ ಬ್ಯಾಂಕ್ ಯೋಜನಾಧಿಕಾರಿಗಳು ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರುರಕ್ಷೆ ಸ್ವೀಕರಿಸಿದರು.

> ನೇತೃತ್ವ ವಹಿಸಿದ್ದ ಅಭಿನವ ಕಾರ್ತಿಕೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಜೀವನ ಉನ್ನತಿಗೆ, ನೆಮ್ಮದಿಯ ಬದುಕಿಗೆ ಧರ್ಮವೇ ಮೂಲ. ವೀರಶೈವ ಧರ್ಮದ ಆದರ್ಶ ಮೌಲ್ಯಗಳು ಜೀವನದ ಉಜ್ವಲ ಭವಿಷ್ಯಕ್ಕೆ ಕಾರಣವಾಗಿವೆ. ಶ್ರೀ ರಂಭಾಪುರಿ ಜಗದ್ಗುರುಗಳವರ ಆಶೀರ್ವಾದ ಮತ್ತು ಭಕ್ತರ ಸಹಕಾರದಿಂದ ಶ್ರೀಮಠದ ಪ್ರಗತಿ ಮತ್ತು ಭಕ್ತರಿಗೆ ಸಂಸ್ಕಾರ ಕೊಡುವ ಸತ್ಕಾರ್ಯಗಳು ನಿರಂತರ ನಡೆದಿರುವುದು ತಮಗೆ ತೃಪ್ತಿ ತಂದಿದೆ ಎಂದರು.

## ನಗರಸಭೆ ಬಜೆಟ್: ಎರಡನೇ ಸುತ್ತಿನ ಸಾರ್ವಜನಿಕ ಸಮಾಲೋಚನೆ ಸಭೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಅವಳಿ ನಗರದ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳಿಗೆ, ಗಣ್ಯ ವ್ಯಕ್ತಿಗಳಿಗೆ, ಹಿರಿಯ ನಾಗರಿಕರಿಗೆ, ಅವಳಿ ನಗರದ ಶ್ರೇಯೋಭಿವೃದ್ಧಿಗೆ ಶ್ರಮಿಸುತ್ತಿರುವ ಹಿತೈಷಿಗಳಿಗೆ, ವಾಣಿಜ್ಯೋದ್ಯ ಸಂಸ್ಥೆಗಳಿಗೆ ಹಾಗೂ ಸ್ವಯಂ ಸೇವಾ ಸಂಸ್ಥೆ ಪದಾಧಿಕಾರಿಗಳಲ್ಲಿ ಹಾಗೂ ಜನಪ್ರತಿನಿಧಿಗಳಾದ ಸದಸ್ಯರಿಗೆ ವಿನಂತಿಸುವುದೇನೆಂದರೆ, ನಗರಸಭೆಯ 2025–26ನೇ ಸಾಲಿನ ಆಯವ್ಯಯ ತಯಾರಿಸಲು ಸರ್ಕಾರದ ಸುತ್ತೋಲೆ ಮಾರ್ಗಸೂಚಿಗಳ ಪ್ರಕಾರ ಸ್ಥಳೀಯ ಸಂಘ–ಸಂಸ್ಥೆಗಳ, ಗಣ್ಯ ನಾಗರಿಕರ ಹಾಗೂ ಸ್ವಯಂ ಸೇವಾ ಸಂಸ್ಥೆಗಳ , ವಾಣಿಜ್ಯೋದ್ಯಮ ನಿಗಮಗಳ ಪದಾಧಿಕಾರಿಗಳೊಂದಿಗೆ ಹಾಗೂ ಜನಪ್ರತಿನಿಧಿಗಳು ಮತ್ತು ಗೌರವಾನ್ವಿತ ಸದಸ್ಯರುಗಳೊಂದಿಗೆ ಸಮಾಲೋಚಿಸಿ ಸಲಹೆ ಸೂಚನೆಗಳನ್ನು ಪಡೆದು ಬಜೆಟ್ ಆಯವ್ಯಯ ತಯಾರಿಸಿ ಮಂಡಿಸಬೇಕಾಗಿದೆ. ಈ ಕುರಿತು ಆಯವ್ಯಯದ ಮೇಲಿನ ಎರಡನೇ ಸುತ್ತಿನ ಸಾರ್ವಜನಿಕ ಸಮಾಲೋಚನಾ ಸಭೆಯನ್ನು ಮಾರ್ಚ್ 26 ರಂದು ಬೆ 10.30 ಗಂಟೆಗೆ ಜಿಲ್ಲಾಧಿಕಾರಿಗಳು ಹಾಗೂ ಆಡಳಿತಾಧಿಕಾರಿಗಳು ಗದಗ ಬೆಟಗೇರಿ ನಗರಸಭೆ ಇವರ ಅಧ್ಯಕ್ಷತೆಯಲ್ಲಿ ನಗರಸಭಾ ಸಭಾ ಭವನದಲ್ಲಿ ಕರೆಯಲಾಗಿದೆ ಎಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಕ್ಷಯರೋಗ ದಿನಾಚರಣೆಗೆ ಚಾಲನೆ ನೀಡಿದ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ**

# ಕ್ಷಯರೋಗಕ್ಕೆ ಭಯಪಡದೇ ಚಿಕಿತ್ಸೆ ಪಡೆಯಿರಿ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರತಿ ವರ್ಷ ವಿಶ್ವ ಕ್ಷಯರೋಗ ದಿನಾಚರಣೆಯನ್ನು ಮಾರ್ಚ್ 24ರಂದು ಆಚರಿಸಲಾಗುತ್ತದೆ. ಕ್ಷಯ ಮುಕ್ತ ದೇಶವನ್ನಾಗಿ ಮಾಡುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಹೇಳಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಸೋಮವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕ್ಷಯರೋಗ ನಿರ್ಮೂಲನಾ ಕೇಂದ್ರ, ಜಿಲ್ಲಾ ವಾರ್ತಾ ಇಲಾಖೆ, ಜಿಲ್ಲಾ ಆಸ್ಪತ್ರೆ, ಗದಗ ವೈದ್ಯಕೀಯ ವಿಜ್ಞಾನಗಳ ಮಹಾವಿದ್ಯಾಲಯ, ಐ.ಎಮ್.ಎ ಗದಗ, ಬಸವೇಶ್ವರ ಪ್ಯಾರಾ ಮೆಡಿಕಲ್ ಕಾಲೇಜು, ಗಾಂಧೀಜಿ ಪ್ಯಾರಾ ಮೆಡಿಕಲ್ ಕಾಲೇಜು, ಪಾಲನ್ ಗಾಲಾ ನರ್ಸಿಂಗ್ ಕಾಲೇಜು ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ವಿಶ್ವ ಕ್ಷಯರೋಗ ದಿನಾಚರಣೆ –2025 ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಕ್ಷಯರೋಗವು ಮೈಕ್ರೋ ಬ್ಯಾಕ್ಟೀರಿಯಂ ಟ್ಯುಬರ್‌ಕ್ಯುಲೋಸಿಸ್ ಎಂಬ ಸೂಕ್ಷ್ಮ ರೋಗಾಣುವಿನಿಂದ ಬರುತ್ತದೆ. ನಮ್ಮ ದೇಶದಲ್ಲಿ 1 ಲಕ್ಷ ಜನರಲ್ಲಿ 210 ಜನರು ಕ್ಷಯರೋಗದಿಂದ ಬಳಲುತ್ತಿದ್ದಾರೆ. ಕ್ಷಯರೋಗ ಬರಲು ಬಡತನ, ಅಪೌಷ್ಟಿಕತೆ, ಸ್ವಚ್ಛತೆ ಇಲ್ಲದಿರುವುದು ಮುಖ್ಯ ಕಾರಣವಾಗಿದ್ದು, ಕ್ಷಯರೋಗವನ್ನು ಸೂಕ್ತ ಚಿಕಿತ್ಸೆಯಿಂದ ಗುಣಪಡಿಸಬಹುದಾಗಿದೆ ಎಂದರು.

ಜಿಲ್ಲಾ ಕ್ಷಯರೋಗ ನಿರ್ಮೂಲನಾ ಅಧಿಕಾರಿ ಡಾ. ಅರುಂಧತಿ ಕುಲಕರ್ಣಿ ಪ್ರಾಸ್ತಾವಿಕವಾಗಿ ಮಾತನಾಡಿ, ಕ್ಷಯರೋಗಕ್ಕೆ ಸಂಬಂಧಿಸಿದಂತೆ ಎಲ್ಲ ಪ್ರಾಥಮಿಕ ಆರೋಗ್ಯ ಕೇಂದ್ರ, ತಾಲೂಕು ಆರೋಗ್ಯ ಕೇಂದ್ರ ಸೇರಿದಂತೆ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತ ಪರೀಕ್ಷೆಯನ್ನು ಮಾಡಲಾಗುತ್ತದೆ. ವಿವೇಚನೆ ಇಲ್ಲದೇ ಎಲ್ಲೆಂದರಲ್ಲಿ ಉಗುಳುವುದು, ಸೀನುವುದು, ಬೀಡಿ–ಸಿಗರೇಟು, ಕುಡಿತ ಸೇವನೆ ಕೂಡಾ ಕ್ಷಯರೋಗಕ್ಕೆ ಪ್ರಮುಖ ಕಾರಣಗಳಾಗಿವೆ.



ಕ್ಷಯರೋಗದ ಕುರಿತು ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲಿ, ಕಾಲೇಜುಗಳಲ್ಲಿ ಅರಿವು ಮೂಡಿಸುವ ಕಾರ್ಯಕ್ರಮ ಮಾಡಲಾಗಿದೆ. ಕಾರಾಗೃಹದಲ್ಲಿಯೂ ಸಹ ಅರಿವು ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕ್ಷಯಮುಕ್ತ ಜಿಲ್ಲೆಯನ್ನಾಗಿಸುವುದು ಮುಖ್ಯ ಗುರಿಯಾಗಿದ್ದು, ಸೂಕ್ತ ಚಿಕಿತ್ಸೆಯಿಂದ ಕ್ಷಯರೋಗವನ್ನು ಗುಣಪಡಿಸಬಹುದಾಗಿದೆ ಎಂದರು.

ಜಿಲ್ಲೆಯ ಕ್ಷಯಮುಕ್ತ ಗ್ರಾಮ ಪಂಚಾಯಿತಿ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷರು ಹಾಗೂ ಪಿಡಿಓಗಳನ್ನು ಸನ್ಮಾನಿಸಲಾಯಿತು. ಗದಗ ಜಿಮ್ಸ್‌ನ ಡಾ.ಅರವಿಂದ ಕರಿನಾಗಣ್ಣವರ ಕ್ಷಯರೋಗದ ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾ. ಮೀನಾಕ್ಷಿ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಬಿ.ಸಿ. ಕರಿಗೌಡರ, ಕುಟುಂಬ ಕಲ್ಯಾಣ ಅಧಿಕಾರಿ ಡಾ. ವೈ.ಕೆ. ಭಜಂತ್ರಿ, ಕುಷ್ಟರೋಗ ನಿಯಂತ್ರಣಾದಿಕಾರಿ ಡಾ. ರಾಜೇಂದ್ರ ಬಸರಿಗಿಡದ, ಆರೋಗ್ಯ ಇಲಾಖೆಯ ರೂಪಸೇನ ಚವ್ಹಾಣ, ಗ್ರಾ.ಪಂ ಅಧ್ಯಕ್ಷರು, ಪಿ.ಡಿ.ಓಗಳು, ಆರೋಗ್ಯ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಗಳು, ನರ್ಸಿಂಗ್ ವಿದ್ಯಾರ್ಥಿಗಳು ಹಾಜರಿದ್ದರು.

ಉಷಾ ಕಾರಂತ ನಾಡಗೀತೆ ಪ್ರಸ್ತುತಪಡಿಸಿದರು. ಕಣವಿ ಸ್ವಾಗತಿಸಿದರು. ಎಸ್.ಎಸ್. ಪೀರಾ ಕಾರ್ಯಕ್ರಮ ನಿರೂಪಿಸಿದರು. ಮೋದಿನ್ನವರ ವಂದಿಸಿದರು.

> ಎಲ್ಲ ಸರ್ಕಾರಿ ಆಸ್ಪತ್ರೆಗಳಲ್ಲಿ ಕ್ಷಯರೋಗಕ್ಕೆ ಸಂಬಂಧಿಸಿ ಉಚಿತ ಕಫ ಪರೀಕ್ಷೆ ಮಾಡಲಾಗುತ್ತದೆ. ಕ್ಷಯರೋಗ ದೃಢಪಟ್ಟರೆ ನಿಗದಿತ ಅವಧಿಯವರೆಗೆ ಮಾತ್ರೆಗಳನ್ನು ಸಹ ನೀಡಲಾಗುತ್ತದೆ. ಕ್ಷಯರೋಗಕ್ಕೆ ಭಯಪಡದೇ ನಿಗದಿತ ಕಾಲಾವಧಿಯಲ್ಲಿಯೇ ಸೂಕ್ತ ಚಿಕಿತ್ಸೆ ಪಡೆದರೆ ಗುಣಮುಖರಾಗಬಹುದಾಗಿದೆ ಎಂದು ಎಸ್.ವಿ. ಸಂಕನೂರ ತಿಳಿಸಿದರು.

# ಇಂದು ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ಎಪ್ರಿಲ್ 2 ರಂದು ಆಚರಿಸಲಾಗುವ ಶ್ರೀ ದೇವರ ದಾಸಿಮಯ್ಯ ಜಯಂತಿ ನಿಮಿತ್ತ ಮಾರ್ಚ್ 26 ರಂದು ಸಂಜೆ 4.30 ಗಂಟೆಗೆ ಅಪರ ಜಿಲ್ಲಾಧಿಕಾರಿಗಳು ಗದಗ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ. ಸಭೆಗೆ ಹಾಜರಾಗಿ ಸಲಹೆ/ ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಯಲಾಟ ಪ್ರದರ್ಶನ ಇಂದು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಜಕ್ಕಲಿ ಗ್ರಾಮದಲ್ಲಿ ಶ್ರೀ ಗ್ರಾಮದೇವತೆಗಳ ಜಾತ್ರಾ ಮಹೋತ್ಸವದ ಅಂಗವಾಗಿ ಮಾ. 26ರ ರಾತ್ರಿ 10ಕ್ಕೆ ಶ್ರೀ ಭುವನೇಶ್ವರಿ ರಂಗಮಂದಿರದಲ್ಲಿ ಶ್ರೀ ಲಕ್ಷ್ಮೀದೇವಿ ಶ್ರೀ ಬನಶಂಕರಿದೇವಿ ಬಯಲಾಟ ಸಂಘ ಗದಗ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದೊಂದಿಗೆ ಕಿರಾತ ಅರ್ಜುನರ ಕಾಳಗ ಅರ್ಥಾತ್ ಪಾಶು ಪತಾಸ್ತ್ರ ಪಡೆದ ಪಾರ್ಥ ಎಂಬ ಸುಂದರ ಬಯಲಾಟ ಪ್ರದರ್ಶನ ಏರ್ಪಡಿಸಲಾಗಿದೆ.

ರೋಣ ಶಾಸಕ, ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ಮಂಡಳಿಯ ಅಧ್ಯಕ್ಷ ಜಿ.ಎಸ್. ಪಾಟೀಲ ಉದ್ಘಾಟನೆಯನ್ನು ನೆರವೇರಿಸುವರು. ಗ್ರಾ.ಪಂ ಮಾಜಿ ಅಧ್ಯಕ್ಷ ಎಮ್.ಎಮ್. ಮೇಟಿ ಅಧ್ಯಕ್ಷತೆ ವಹಿಸುವರು. ರವೀಂದ್ರನಾಥ ದೊಡ್ಡಮೇಟಿ, ಶೇಖಣ್ಣ ಮೇಟಿ, ಲಿಂಗಪ್ಪ ದೊಡ್ಡಮೇಟಿ, ಅನಿಲಕುಮಾರ ಹೊಸಮನಿ, ಶರಣಪ್ಪ ಪಟ್ಟಣಶೆಟ್ಟಿ, ಮಹೇಶ್ವರಪ್ಪ ಕೋರಿ, ಅಶೋಕಪ್ಪ ಯಾವಗಲ್ಲ, ಶರಣಪ್ಪ ಮಾಸ್ತರ ಬೂದಿಹಾಳ, ಅಡಿವೆಪ್ಪ ರೋಣದ, ಬಸವರಾಜ ಶ್ಯಾಶೆಟ್ಟಿ, ಡಾ. ಎ.ವಿ. ನರೇಗಲ್ಲ ಮುಂತಾದವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

## ಬೀದಿ ವ್ಯಾಪಾರಿಗಳಿಗೆ ಹಮ್ಮಿಕೊಂಡಿದ್ದ ಕಾನೂನು ಅರಿವು ಕಾರ್ಯಕ್ರಮದಲ್ಲಿ ಉಮೇಶ ಸಂಗನಾಳಮಠ

# ಸರ್ಕಾರಿ ಸವಲತ್ತುಗಳ ಸಮರ್ಪಕ ಬಳಕೆಯಾಗಲಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಬೀದಿ ವ್ಯಾಪಾರಸ್ಥರು ಸರ್ಕಾರದ ಸೌಲಭ್ಯಗಳನ್ನು ಪಡೆದುಕೊಂಡು, ಉತ್ತಮ ಆರೋಗ್ಯದ ಜೊತೆಗೆ ಆರ್ಥಿಕ ಅಭಿವೃದ್ಧಿ ಹೊಂದಬೇಕು ಎಂದು ನ್ಯಾಯವಾದಿ ಉಮೇಶ ಸಂಗನಾಳಮಠ ಹೇಳಿದರು.

ಸ್ಥಳೀಯ ಪಟ್ಟಣ ಪಂಚಾಯಿತಿಯಲ್ಲಿ ಜಿಲ್ಲಾಡಳಿತ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ, ಪಟ್ಟಣ ಪಂಚಾಯಿತಿ ಕಾರ್ಯಾಲಯಗಳ ಆಶ್ರಯದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಪಿಎಂ ಸ್ವನಿಧಿ ಶಿಬಿರ ಹಾಗೂ 8 ಕಲ್ಯಾಣ ಯೋಜನೆಗಳ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬೀದಿ ಬದಿ ವ್ಯಾಪಾರಸ್ಥರು ಕಡ್ಡಾಯವಾಗಿ ಪ.ಪಂನಿಂದ ಗುರುತಿನ ಚೀಟಿ ಹಾಗೂ ವ್ಯಾಪಾರ ಮಾರಾಟ ಪತ್ರವನ್ನು ಪಡೆಯಬೇಕು. ನಿಮ್ಮ ಎಲ್ಲ ದಾಖಲೆಗಳನ್ನು ಪ.ಪಂಗೆ ನೀಡಿ ಸರ್ಕಾರಿ ಸವಲತ್ತುಗಳನ್ನು ಸಮರ್ಪಕವಾಗಿ ಪಡೆದುಕೊಳ್ಳಬೇಕು. ಸುಪ್ರೀಂಕೋರ್ಟ್ ಬೀದಿ ಬದಿ ವ್ಯಾಪಾರಿಗಳ ಸಂರಕ್ಷಣೆ, ಜೀವನೋಪಾಯ ಹಾಗೂ ನಿಯಂತ್ರಣ ಕಾಯ್ದೆ 2014 ಜಾರಿಗೆ



ತಂದಿದ್ದು, ಈ ಕಾಯ್ದೆಯು ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಜಾರಿಯಲ್ಲಿದೆ. ಇದು ಅಧಿಕಾರಿಗಳಷ್ಟೇ ಅಲ್ಲದೇ ಬೀದಿ ಬದಿ ವ್ಯಾಪಾರಿಗಳಿಗೆ ಎದುರಾಗುವ ತೊಂದರೆ ನಿವಾರಿಸಲು ಸಹಕಾರಿಯಾಗಿದೆ ಎಂದರು.

ಗದಗ ಎಸ್.ಎ ಮಾನ್ವಿ ಕಾನೂನು ಮಹಾವಿದ್ಯಾಲಯದ ವಿದ್ಯಾರ್ಥಿ ಸಿಕಂದರ ಆರಿ ಕಾನೂನು ಅರಿವು ಬಗ್ಗೆ ಉಪನ್ಯಾಸ ನೀಡಿದರು. ಬೀದಿ ಬದಿ ವ್ಯಾಪಾರಸ್ಥರಿಗೆ ಆರೋಗ್ಯ ತಪಾಸಣೆ, ಸಾಲ ಮೇಳ ಮತ್ತು ಡಿಜಿಟಲ್ ಕ್ಯಾಂಪ್ ಸೇರಿದಂತೆ ಹಲವು ಕಾರ್ಯಕ್ರಮಗಳು ಜರುಗಿದವು. ಬ್ಯಾಂಕ್ ಸಾಲವನ್ನು ನಿಗದಿತ ಸಮಯದೊಳಗೆ ಪಾವತಿ ಮಾಡಿದ 5 ಜನ ವ್ಯಾಪಾರಸ್ಥರಿಗೆ ಸನ್ಮಾನ ಜರುಗಿತು.

ಈವೇಳೆ ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ, ಪ.ಪಂ ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ, ಸ್ಥಾಯಿ ಸಮಿತಿ ಚೇರಮನ್ ಮುತ್ತಪ್ಪ ನೂಲ್ಕಿ, ಸದಸ್ಯರಾದ ಮಲ್ಲಿಕಾರ್ಜುನಗೌಡ ಭೂಮನಗೌಡ್ರ, ಮಲ್ಲಿಕಸಾಬ ರೋಣದ, ಶ್ರೀಶೈಲಪ್ಪ ಬಂಡಿಹಾಳ, ಈರಪ್ಪ ಜೋಗಿ, ವಿಜಯಲಕ್ಷ್ಮೀ ಚಲವಾದಿ, ಅಕ್ಕಮ್ಮ ಮಣ್ಣೊಡ್ಡರ, ಕಳಕನಗೌಡ ಪೊಲೀಸ್‌ಪಾಟೀಲ, ಶೇಖಪ್ಪ ಕೆಂಗಾರ, ಮೈಲಾರಪ್ಪ ಗೋಡಿ, ಸಕ್ರಪ್ಪ ಹಡಪದ, ಬೀದಿ ಬದಿ ವ್ಯಾಪಾರಸ್ಥರಾದ ಶಿವಾನಂದ ಪದ್ಮಸಾಲಿ, ಮೆಹಬೂಬಸಾಬ ಹೊಸಮನಿ, ದೇವಕ್ಕ ರಾಠೋಡ, ಬೀಬಿಜಾನ ಸರ್ಕವಾಸ, ಶರಣಪ್ಪ ಕಲಾಲಬಂಡಿ, ಪ.ಪಂ ಸಿಬ್ಬಂದಿಗಳಾದ ವೆಂಕಟೇಶ ಮಡಿವಾಳರ, ಎಂ.ಎಚ್. ಸೀತಿಮನಿ, ಶಂಕ್ರಪ್ಪ ದೊಡ್ಡಣ್ಣವರ, ಕಾವ್ಯಾ ಅರವಟಗಿಮಠ, ಸಂಜೀವ ಗುಡಿಮನಿ, ಉದಯ ಮುದೇನಗುಡಿ ಸೇರಿದಂತೆ ಇತರರು ಇದ್ದರು. ಆರೀಫ್ ಮಿರ್ಜಾ ನಿರ್ವಹಿಸಿದರು.

ಮುಖ್ಯಾಧಿಕಾರಿ ಮಹೇಶ ನಿಡಶೇಶಿ ಮಾತನಾಡಿ, ಬೀದಿ ಬದಿ ವ್ಯಾಪಾರಿಗಳಿಗೆ ನೆರವು ನೀಡಲು ಪ್ರಧಾನಮಂತ್ರಿ ಜೀವನ್ ಜ್ಯೋತಿ, ಸುರಕ್ಷಾ ಬೀಮಾ, ಶ್ರಮಯೋಗಿ ಧನ ಯೋಜನೆ, ಒನ್ ನೇಷನ್ ಒನ್ ರೇಷನ್ ಕಾರ್ಡ್, ಪ್ರಧಾನಮಂತ್ರಿ ಜನಧನ್ ಯೋಜನೆ, ಲೇಬರ್ ಕಾರ್ಡ್, ಜನನಿ ಸುರಕ್ಷಾ ಯೋಜನೆ, ಪ್ರಧಾನಮಂತ್ರಿ ಮಾತೃ ವಂದಾನ ಯೋಜನೆ, ಪಿಎಂ ಸ್ವನಿಧಿ ಯೋಜನೆ ಸೇರಿದಂತೆ ಅನೇಕ ಯೋಜನೆಗಳನ್ನು ಜಾರಿಗೊಳಿಸಲಾಗಿದೆ. ಪಾರಂಪರಿಕವಾಗಿ ವ್ಯಾಪಾರವನ್ನೇ ನಂಬಿ ಜೀವನ ಸಾಗಿಸುತ್ತಿರುವ ಕುಟುಂಬಗಳ ಆರ್ಥಿಕ ಅಭಿವೃದ್ಧಿಗೆ ಇದು ಪೂರಕವಾಗಲಿದೆ ಎಂದರು.

# ಸಾಧಕರಾಗಲು ಪ್ರೇರಣೆ ಅವಶ್ಯಕ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸ್ಪರ್ಧಾತ್ಮಕ ಜಗತ್ತನ್ನು ಎದುರಿಸಲು ಪ್ರೇರಣೆ ಮುಖ್ಯ ಎಂದು ಪ್ರಾಚಾರ್ಯ ಡಾ. ಆರ್. ಎಂ. ಕಲ್ಲನಗೌಡರ ಹೇಳಿದರು.

ಅವರು ಪಟ್ಟಣದ ಆರ್. ಎನ್. ದೇಶಪಾಂಡೆ ಸರಕಾರಿ ಪ್ರಥಮದರ್ಜೆ ಕಾಲೇಜಿನಲ್ಲಿ ಪ್ರೇರಣಾ ಹಾಗೂ ಐಕ್ಯೂಎಸಿ ಸಹಯೋಗದಲ್ಲಿ ಜರುಗಿದ ಪ್ರೇರಣಾ ಮೆಂಟರ್‌ಶಿಪ್ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿ, ಪ್ರತಿಯೊಂದು ಕ್ಷೇತ್ರವೂ ತೀವ್ರ ಸ್ಪರ್ಧೆಯಿಂದ ಕೂಡಿದ್ದು, ಪ್ರತಿಯೊಬ್ಬರಿಗೂ ಪ್ರೇರಣೆ ನೀಡುವುದು ಅವಶ್ಯಕವಾಗಿದೆ. ಮಕ್ಕಳಲ್ಲಿ ಸಾಧನೆಗೆ ಪ್ರೇರಣೆ ಎನ್ನುವುದು ನಮ್ಮೊಳಗಿಂದ ಬಂದಾಗ ಸಾಧನೆ ಕಷ್ಟವಾಗಲಾರದು ಎಂದರು.





ಧಾರವಾಡದ ಚಾಣಕ್ಯ ಕರಿಯರ್ ಅಕಾಡೆಮಿಯ ನಿರ್ದೇಶಕ ಪ್ರದೀಪ ಗುಡ್ಡದ ಮಾತನಾಡಿ, ಆಧುನಿಕತೆ ಬೆಳೆದಂತೆ ಸ್ಪರ್ಧಾತ್ಮಕ ಜಗತ್ತು ನಿರ್ಮಾಣವಾಗಿದೆ. ಮಕ್ಕಳು ಹೆಚ್ಚು ಹೆಚ್ಚು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಉಪನ್ಯಾಸಕರ ಸಹಕಾರ ಪಡೆದುಕೊಂಡು ಉತ್ತಮ ಹುದ್ದೆಯನ್ನು ಅಲಂಕರಿಸಬೇಕು ಎಂದರು. ಪ್ರಾಧ್ಯಾಪಕಿ ಅನುಪಮಾ, ನಾಗರಾಜ ಎ ಹಾಗೂ ಸಿಬ್ಬಂದಿಗಳು ಇದ್ದರು.

# ಡಿ.ಎಸ್.ಎಸ್ ಮಹಿಳಾ ಪದಾಧಿಕಾರಿಗಳ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಪ್ರೊ. ಬಿ. ಕೃಷ್ಣಪ್ಪ ಸ್ಥಾಪಿತ ಕರ್ನಾಟಕ ದಲಿತ ಸಂಘರ್ಷ ಸಮಿತಿ ಸಂಘಟನೆಯ ಜಿಲ್ಲಾ ಮಹಿಳಾ ಘಟಕದ ಪದಾಧಿಕಾರಿಗಳ ಆಯ್ಕೆ ಸಭೆಯನ್ನು ನಗರದ ಪ್ರವಾಸಿ ಮಂದಿರದಲ್ಲಿ ಕರೆಯಲಾಗಿತ್ತು. ಸಭೆಗೆ ರಾಜ್ಯ ಸಂಘಟನಾ ಸಂಚಾಲಕ ಎಸ್.ಎನ್. ಬಳ್ಳಾರಿ, ರಾಜ್ಯ ವಿಭಾಗೀಯ ಸಂಚಾಲಕ ಪ್ರಕಾಶ ಎಮ್.ಹೊಸಳ್ಳಿ, ಜಿಲ್ಲಾ ಸಂಚಾಲಕ ದುರಗಪ್ಪ ಎಲ್. ಹರಿಜನ, ಜಿಲ್ಲಾ ಸಂಘಟನಾ ಸಂಚಾಲಕ ಸತೀಶ ಎಚ್. ಹುಲಿ, ಮಹಿಳಾ ಘಟಕದ ಜಿಲ್ಲಾ ಸಂಚಾಲಕಿ ಸುಶೀಲಾ ಶಿವಾನಂದ ಚಲವಾದಿ, ಜಿಲ್ಲಾ ಸಂಘಟನಾ ಸಂಚಾಲಕಿ ಸುಮಂಗಲಾ ಡಂಬಳ, ವಿದ್ಯಾರ್ಥಿ ಘಟಕದ



ಸಂಚಾಲಕ ಕೃಷ್ಣ ಎಮ್.ಪೂಜಾರ ಮುಂತಾದವರು ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನು ಉದ್ದೇಶಿಸಿ ಎಸ್.ಎನ್. ಬಳ್ಳಾರಿ ಮಾತನಾಡಿ, ಈ ಸಂಘಟನೆಯು ಈಗಾಗಲೇ ರಾಜ್ಯ ಮಟ್ಟದಲ್ಲಿ ಕ್ರಿಯಾಶೀಲವಾಗಿ ಕಾರ್ಯಚಟುವಟಿಕೆ ಮಾಡುತ್ತಿದೆ. ಗದಗದಲ್ಲಿಯ ಕೂಡ ಮಹಿಳಾ ಸಂಘಟನೆಯನ್ನು ಕ್ರಿಯಾಶೀಲಗೊಳಿಸಿ ನೊಂದ ಮಹಿಳೆಯರಿಗೆ ನ್ಯಾಯ ಕೊಡುವ ನಿಟ್ಟಿನಲ್ಲಿ ಸಕ್ರಿಯರಾಗಿದ್ದೇವೆ ಹೇಳಿದರು.

ಪ್ರಕಾಶ ಹೊಸಳ್ಳಿ ಮಾತನಾಡಿ, ಜಿಲ್ಲಾ ಸಮಿತಿಯ ಎಲ್ಲಾ ಪದಾಧಿಕಾರಿಗಳು ನೊಂದ ಸಮುದಾಯದ ಏಳಿಗೆಗಾಗಿ ಕೆಲಸ ಮಾಡಬೇಕು. ಮಹಿಳಾ ಸಂಘಟನೆಯವರು, ಜಿಲ್ಲಾ ಪದಾಧಿಕಾರಿಗಳು ಪ್ರತಿಯೊಂದು ಗ್ರಾಮಕ್ಕೆ ಭೇಟಿ ನೀಡಿ ನೊಂದ ಮಹಿಳೆಯರ ಬೆಂಬಲಕ್ಕೆ ನಿಲ್ಲಬೇಕು ಎಂದು ಹೇಳಿದರು.

ದುರಗಪ್ಪ ಹರಿಜನ, ಸತೀಶ ಹುಲಿ ಮಾತನಾಡಿದರು. ಜಿಲ್ಲಾ ಸಂಘಟನಾ ಸಂಚಾಲಕರಾಗಿ ಅಂಜನಾದೇವಿ, ಮರಿಯಪ್ಪ ಮ್ಯಾಗೇರಿ, ಶೋಭಾ ಸೋಮಪ್ಪ ತಳಗೇರಿ, ಜ್ಯೋತಿ ನಿಂಗಪ್ಪ ಗೋವಿನಕೊಪ್ಪ, ದುರಗವ್ವ ದುರಗಪ್ಪ ವಡ್ಡರ, ದೇವಕ್ಕ ದುರಗಪ್ಪ ಕೋಮಣ್ಣನವರ, ಲಕ್ಷ್ಮೀ ಶಿವರಾಜ ವಡ್ಡರ ಮುಂತಾದವರನ್ನು ಆಯ್ಕೆ ಮಾಡಲಾಯಿತು. ಆಯ್ಕೆಯಾದ ಪದಾಧಿಕಾರಿಗಳಿಗೆ ಸುಭಾಸ ದೊಡ್ಡಮನಿ ಹಾಗೂ ಪರಶುರಾಮ ದೊಡ್ಡಮನಿ ಅಭಿನಂದನೆಗಳನ್ನು ಸಲ್ಲಿಸಿದರು ಎಂದು ವಿದ್ಯಾರ್ಥಿ ಒಕ್ಕೂಟದ ಸಂಚಾಲಕ ಕೃಷ್ಣಾ ಎಮ್.ಪೂಜಾರ ತಿಳಿಸಿದ್ದಾರೆ.


## ಶಿಕ್ಷಣಪ್ರೇಮಿ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಷ್ಠಾನದಿಂದ ಪ್ರತಿಭಾ ಪುರಸ್ಕಾರ

# ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಸುವರ್ಣಾವಕಾಶ

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಶಿಕ್ಷಣಪ್ರೇಮಿ, ತ್ಯಾಗಜೀವಿ ಬಿ.ಜಿ. ಅಣ್ಣಿಗೇರಿ ಗುರುಗಳ ಆಶ್ರಮದಲ್ಲಿ 2025–26ನೇ ಶೈಕ್ಷಣಿಕ ವರ್ಷದಲ್ಲಿ ಟ್ಯೂಶನ್ ಪಡೆದುಕೊಂಡು ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳನ್ನು ಪಡೆಯುವ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಬಿ.ಜಿ.ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನವು ವಿಶೇಷ ಪುರಸ್ಕಾರವನ್ನು ನೀಡಲಿದೆ ಎಂದು ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಪಾಟೀಲ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ರಾಜ್ಯದಲ್ಲಿ ಮೊದಲ 10 ರ್‍ಯಾಂಕ್‌ಗಳಲ್ಲಿ ತೇರ್ಗಡೆಯಾಗುವ ಆಶ್ರಮದಲ್ಲಿ ಟ್ಯೂಶನ್ ಪಡೆದ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗೆ 1 ಲಕ್ಷ ರೂ.ಗಳ ಪುರಸ್ಕಾರ, 100 ರ್‍ಯಾಂಕ್‌ಗಳಲ್ಲಿ ತೇರ್ಗಡೆಯಾಗುವ ವಿದ್ಯಾರ್ಥಿಗೆ 50 ಸಾವಿರ ರೂ.



ಗಳ ಪುರಸ್ಕಾರ, 500 ಸ್ಥಾನಗಳಲ್ಲಿ ತೇರ್ಗಡೆಯಾಗುವ ವಿದ್ಯಾರ್ಥಿಗೆ 25 ಸಾವಿರ ರೂ.ಗಳ ಪುರಸ್ಕಾರ ಹಾಗೂ ಒಂದು ಸಾವಿರ ಸ್ಥಾನಗಳಲ್ಲಿ ತೇರ್ಗಡೆಯಾಗುವ ವಿದ್ಯಾರ್ಥಿಗೆ 10 ಸಾವಿರ ರೂ.ಗಳ ಪುರಸ್ಕಾರ ನೀಡಿ ಗೌರವಿಸಲಾಗುವದು.

ಟ್ಯೂಶನ್ ಹಾಗೂ ಪ್ರತಿಭಾ ಪುರಸ್ಕಾರಗಳಿಂದ ವಂಚಿತರಾಗುವ ಗ್ರಾಮೀಣ ಪ್ರದೇಶದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣಕ್ಕೆ ಪ್ರೋತ್ಸಾಹಿಸಬೇಕೆಂಬ ಮಹದಾಸೆಯನ್ನು ಹೊಂದಿದ್ದ ಬಿ.ಜಿ. ಅಣ್ಣಿಗೇರಿ ಗುರುಗಳ ಕನಸನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ಪ್ರತಿಭಾ ಪ್ರತಿಷ್ಠಾನದ ಗೌರವ ಅಧ್ಯಕ್ಷರಾದ ಪೂಜ್ಯ ಜ. ಡಾ. ಸಿದ್ದರಾಮ ಮಹಾಸ್ವಾಮಿಗಳ ಮಾರ್ಗದರ್ಶನದಲ್ಲಿ ಈ ನಿರ್ಧಾರವನ್ನು ತೆಗೆದುಕೊಳ್ಳಲಾಗಿದ್ದು, ವಿದ್ಯಾರ್ಥಿಗಳು ಈಗಿನಿಂದಲೇ ಅಭ್ಯಾಸದಲ್ಲಿ ತೊಡಗಬೇಕೆಂಬುದು ಪ್ರತಿಷ್ಠಾನದ ಸದಾಶಯವಾಗಿದೆ.

ಗದಗ ಪರಿಸರದಲ್ಲಿ ಕಳೆದ 60 ವರ್ಷಗಳಿಂದ 8, 9 ಹಾಗೂ 10ನೇ ತರಗತಿಯ ವಿದ್ಯಾರ್ಥಿಗಳಿಗೆ, ಅದರಲ್ಲೂ ವಿಶೇಷವಾಗಿ ಗ್ರಾಮೀಣ ಪ್ರದೇಶದವರಿಗೆ ಉಚಿತ ಟ್ಯೂಶನ್ ಎಂಬ ಹೆಗ್ಗಳಿಕೆಯೊಂದಿಗೆ ಮೌಲ್ಯಯುತ ಶಿಕ್ಷಣ ನೀಡುವ ಮೂಲಕ ಬಿ.ಜಿ. ಅಣ್ಣಿಗೇರಿ ಗುರುಗಳ ನಂತರವೂ ಅವರ ಶಿಷ್ಯ ಬಳಗ, ಗುರುಬಳಗ ಆಶ್ರಮದಲ್ಲಿ ಟ್ಯೂಶನ್ ಹೇಳುವ ಕೈಂಕರ್ಯವನ್ನು ಮುನ್ನಡೆಸುವ ಮೂಲಕ ಗುರುನಮನಕ್ಕೆ ಮುಂದಾಗಿದ್ದಾರೆ.

8, 9 ಹಾಗೂ 10ನೇ ತರಗತಿಯ ವಿದ್ಯಾರ್ಥಿ–ವಿದ್ಯಾರ್ಥಿನಿಯರಿಗೆ ಏಪ್ರಿಲ್ 1ರಿಂದ ಬೇಸಿಗೆಯ ಟ್ಯೂಶನ್ ವರ್ಗಗಳನ್ನು ಆರಂಭಿಸಲಿದೆ. ವಿಶೇಷವಾಗಿ 8ನೇ ತರಗತಿಗೆ ಪ್ರವೇಶ ಪಡೆದಿರುವ ಗ್ರಾಮೀಣ ಪ್ರದೇಶದ ಆಯ್ದ 20 ಬಡ ವಿದ್ಯಾರ್ಥಿಗಳಿಗೆ 10ನೇ ತರಗತಿಯವರೆಗೂ ಅಣ್ಣಿಗೇರಿ ಗುರುಗಳ ಆಶ್ರಮದಲ್ಲಿ ಉಚಿತ ಟ್ಯೂಶನ್‌ನೊಂದಿಗೆ ಉಚಿತ ಊಟ ಮತ್ತು ಉಚಿತ ವಸತಿ ಸೌಲಭ್ಯವಿದೆ. (ವಿದ್ಯಾರ್ಥಿನಿಯರಿಗೆ ವಸತಿಗೆ ಅವಕಾಶವಿಲ್ಲ)

ಅನುಭವಿ ಶಿಕ್ಷಕರ ತಂಡವು ಉಚಿತ ಟ್ಯೂಶನ್ ಹೇಳಲಿದ್ದು, ಆಸಕ್ತ ವಿದ್ಯಾರ್ಥಿಗಳು ಬಿ.ಜಿ. ಅಣ್ಣಿಗೇರಿ ಗುರುಗಳ ಆಶ್ರಮ, ಡಾ. ಪಂ. ಪುಟ್ಟರಾಜ ಗವಾಯಿಗಳ ಪುತ್ಥಳಿ ಹತ್ತಿರ (ಭೂಮರಡ್ಡಿ ಸರ್ಕಲ್) ಗದಗ, ಫೋನ್ ನಂ: 9902652860, 9481008700, 9480555766, 8495877018 ಇಲ್ಲಿಗೆ ಸಂಪರ್ಕಿಸಿ ಹೆಸರು ನೋಂದಾಯಿಸಲು ಶಿವಕುಮಾರ ಪಾಟೀಲ ತಿಳಿಸಿದ್ದಾರೆ.

## ಅಗಡಿ ಇಂಜಿನಿಯರಿಂಗ್ ಕಾಲೇಜಿಗೆ ನ್ಯಾಕ್ ಮಾನ್ಯತೆ | ಆಡಳಿತ ಮಂಡಳಿ ಹರ್ಷ

# ಶಿಕ್ಷಣ ಸಂಸ್ಥೆಯ ಗುಣಮಟ್ಟಕ್ಕೆ ಖಾತ್ರಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸುಮಾರು 2 ದಶಕಗಳ ಹಿಂದೆ ಪಟ್ಟಣದಲ್ಲಿ ಪ್ರಾರಂಭಗೊಂಡ ಶ್ರೀಮತಿ ಕಮಲಾ–ಶ್ರೀ ವೆಂಕಪ್ಪ ಎಂ ಅಗಡಿ ಇಂಜಿನಿಯರಿಂಗ್ ಕಾಲೇಜು ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಉನ್ನತ ಶಿಕ್ಷಣದ ಕನಸನ್ನು ನನಸು ಮಾಡಿದೆ. ಈ ಕಾಲೇಜಿಗೆ ಈಗ ವಿಶ್ವವಿದ್ಯಾಲಯ ಅನುದಾನ ಆಯೋಗದ (ಯುಜಿಸಿ) ರಾಷ್ಟ್ರೀಯ ಮೌಲ್ಯಮಾಪನ ಮಾನ್ಯತಾ ಮಂಡಳಿ(ನ್ಯಾಕ್) ವತಿಯಿಂದ ಬಿ++ ಮಾನ್ಯತೆ ಲಭಿಸಿದೆ ಎಂದು ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಪರಶುರಾಮ ಬಾರಕಿ ತಿಳಿಸಿದರು.

ಕಾಲೇಜಿನಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಈ ಕುರಿತು ತಮ್ಮ ಹರ್ಷವನ್ನು ವ್ಯಕ್ತಪಡಿಸಿ ಮಾತನಾಡಿದ ಅವರು, ಪ್ರಥಮ ಬಾರಿಗೆ ನಮ್ಮ ಸಂಸ್ಥೆಗೆ ನ್ಯಾಕ್ ಮಾನ್ಯತೆ ಲಭಿಸಿದ್ದು, ಇದೊಂದು ಹೆಮ್ಮೆಯ ವಿಷಯವಾಗಿದೆ. ಸಮಿತಿಯು ಶಿಕ್ಷಣದ ಗುಣಮಟ್ಟ, ಸಂಶೋಧನೆಗಳು,





ಅದ, ್ಯಾಪ್'ಕ'ರಂ, ಮೂಲಸೌಲಭ್ಯಗಳು ಇತ್ಯಾದಿ ವಿಷಯಗಳಲ್ಲಿ ಶಿಕ್ಷಣ ಸಂಸ್ಥೆಯ ಗುಣಮಟ್ಟವನ್ನು ಪರೀಕ್ಷಿಸುತ್ತಿದ್ದು, ಇವೆಲ್ಲವುಗಳಲ್ಲಿ ಅಗಡಿ ಇಂಜಿನಿಯರಿಂಗ್ ಸಂಸ್ಥೆ ಯಶಸ್ವಿಯಾಗಿ ನಿರ್ವಹಿಸುತ್ತಿರುವದನ್ನು ಮನಗಂಡು ನ್ಯಾಕ್ ಮಾನ್ಯತೆ ನೀಡಿರುವದರಿಂದ ಸಂಸ್ಥೆಯ ಬಗ್ಗೆ ಜನರಲ್ಲಿ ಮತ್ತಷ್ಟು ವಿಶ್ವಾಸಾರ್ಹತೆ ಮೂಡುವಂತಾಗಿದೆ. ಸಂಸ್ಥೆಯ ಅಧ್ಯಕ್ಷ ಡಾ. ಹರ್ಷವರ್ಧನ್ ಅಗಡಿ ಮತ್ತು ಉಪಾಧ್ಯಕ್ಷೆ ಗೀತಾ ಹರ್ಷವರ್ಧನ ಅಗಡಿ ಮತ್ತು ಆಡಳಿತ ಮಂಡಳಿಯವರು ಹರ್ಷ ವ್ಯಕ್ತಪಡಿಸಿದ್ದು, ಸಂಸ್ಥೆಯ ಎಲ್ಲ ಸಿಬ್ಬಂದಿಗಳಿಗೆ ಶುಭ ಕೋರಿದ್ದಾರೆ ಎಂದು ಹೇಳಿದರು.

ನ್ಯಾಕ್ ಮಾನ್ಯತೆಯ ಸಂದರ್ಭದಲ್ಲಿ ಮುಖ್ಯ ಸಂಯೋಜಕ ಡಾ. ಆರ್.ಎಂ. ಪಾಟೀಲ, ಆಡಳಿತಾಧಿಕಾರಿ ಪ್ರೊ. ವಿಕ್ರಮ ಶಿರೋಳ, ಶೈಕ್ಷಣಿಕ ಸಂಯೋಜಕ ಡಾ. ಸುಭಾಸ ಮೇಟಿ, ಕೋರ್ ಕಮಿಟಿ ಸದಸ್ಯರು, ವಿಭಾಗಗಳ ಮುಖ್ಯಸ್ಥರು ಹಾಜರಿದ್ದರು.

ಈ ಸಂದರ್ಭದಲ್ಲಿ ಡಾ. ಆರ್.ಎಂ. ಪಾಟೀಲ, ಪಿಯು ಕಾಲೇಜು ಪ್ರಾಚಾರ್ಯ ಡಾ. ಎನ್. ಹಯವದನ, ಡಾ. ಸುಭಾಸ ಮೇಟಿ, ಪ್ರೊ. ವಿಕ್ರಂ ಶಿರೋಳ, ರವಿ ಪ್ರಕಾಶ, ಸಂಯೋಜಕರಾದ ಡಾ. ಶಿವಕುಮಾರ ಗೌಡರ, ಡಾ. ಎಸ್.ವಿ. ಮಹಾಪುರುಷ, ಪ್ರೊ. ಸೋಮಶೇಖರ ಕೆರಿಮನಿ ಹಾಜರಿದ್ದರು.

ಮಾ.27 ಮತ್ತು 28ರಂದು ಜಾಗತಿಕ ಸಮ್ಮಿಲನ ಖಅಒಖಇಖ 2025 ಇಂಜಿನಿಯರಿಂಗ್ ಮತ್ತು ತಂತ್ರಜ್ಞಾನದಲ್ಲಿ ಬಹು–ಶಿಸ್ತಿನ ಸಂಶೋಧನಾ ಪ್ರವೃತ್ತಿಗಳ ಕುರಿತು 2ನೇ ಅಂತಾರಾಷ್ಟ್ರೀಯ ಸಮ್ಮೇಳನ ನಡೆಸಲಾಗುವದು. ಈ ಕಾರ್ಯಕ್ರಮಕ್ಕೆ ದೇಶ–ವಿದೇಶಗಳಿಂದ ಅತಿಥಿಗಳು ಆಗಮಿಸಲಿದ್ದು, ವಿದೇಶದಿಂದ ಒಂದು ಮತ್ತು ವಿವಿಧ ರಾಜ್ಯಗಳಿಂದ ಅನೇಕ ಸಂಶೋಧನಾ ವಿಷಯಗಳು ಮಂಡನೆಯಾಗಲಿವೆ. ಈಗಾಗಲೆ ಸಂಸ್ಥೆಯ ವತಿಯಿಂದ ಪಿಯುಸಿ ಕಾಲೇಜು ಯಶಸ್ವಿಯಾಗಿ ನಡೆಯುತ್ತಿದ್ದು, ಸುಮಾರು 12 ಕೋಟಿ ರೂಗಳ ವೆಚ್ಚದಲ್ಲಿ ಪಿಯುಸಿ ಕಾಲೇಜು ಕಟ್ಟಡ ನಿರ್ಮಾಣವಾಗಲಿದೆ ಎಂದು ಡಾ. ಪರಶುರಾಮ ಬಾರಕಿ ಹೇಳಿದರು.

## ವಿವಿಧ ಮಠಾಧೀಶರಿಂದ ಪ್ರವಚನ, ಕಲಾ ತಂಡಗಳಿಂದ ಸಾಂಸ್ಕೃತಿಕ, ರಸಮಂಜರಿ ಕಾರ್ಯಕ್ರಮ

# ಇಂದಿನಿಂದ ಮಾ.30ರವರೆಗೆ ದುರ್ಗಾದೇವಿ ಜಾತ್ರೆ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಇಂದಿನಿಂದ ಸಮೀಪದ ಕಲ್ಲೂರ ಗ್ರಾಮದ ದುರ್ಗಾದೇವಿ ಜಾತ್ರಾ ಮಹೋತ್ಸವ ಅದ್ಧೂರಿಯಾಗಿ ನಡೆಯಲಿದೆ. ಜಾತ್ರೆಯ ಅಂಗವಾಗಿ ವಿವಿಧ ಮಠಾಧೀಶರಿಂದ ಪ್ರವಚನ, ಕಲಾ ತಂಡಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

ಇಂದು ಮತ್ತು ನಾಳೆ ಸಂಜೆ 7 ಗಂಟೆಗೆ ನೀಲಗುಂದ ಗುದ್ನೇಶ್ವರ ಮಠದ ಪ್ರಭುಲಿಂಗ ಸ್ವಾಮೀಜಿ ಹಾಗೂ ಕುಂದಗೋಳ ಕಲ್ಯಾಣಪುರ ಮಠದ ಅಭಿನವ ಬಸವಣ್ಣಜ್ಜನವರು, ಚಿತ್ರದುರ್ಗ ಜಿಲ್ಲೆಯ ಶಿವಶರಣ ಮಾದಾರ ಚನ್ನಯ್ಯ ಗುರುಪೀಠದ ಬಸವಮೂರ್ತಿ ಮಾದಾರ ಚನ್ನಯ್ಯಸ್ವಾಮೀಜಿ, ಮಣಕವಾಡ ಅನ್ನದಾನೀಶ್ವರ ಮಠದ ಸಿದ್ಧರಾಮದೇವರಿಂದ ಪ್ರವಚನ ಕಾರ್ಯಕ್ರಮ ಜರುಗಲಿವೆ. ಮಾ.28ರಂದು ಶಿರುಂಜ ಜ್ಞಾನ ಯೋಗಾಶ್ರಮದ ಬಸವಸಮರ್ಥ ಸ್ವಾಮೀಜಿ ಅವರಿಂದ ಪ್ರವಚನ ಜರುಗಲಿದ್ದು, ಬಳಿಕ ಅರುಣೋದಯ ವೈವಿಧ್ಯಮಯ ಜಾನಪದ ಕಲಾ ತಂಡದಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ. ಮಾ.29 ರಂದು ಮೈಲಾರಲಿಂಗೇಶ್ವರ ದೇವಸ್ಥಾನದಿಂದ ದುರ್ಗಾದೇವಿ ದೇವಸ್ಥಾನದವರೆಗೆ ಅಗ್ನಿ ಕಟ್ಟಿಗೆಯ ಹೊತ್ತ ಚಕ್ಕಡಿಗಳ ಮೆರವಣಿಗೆಯೂ ವಿಜೃಂಭಣೆಯಿಂದ ಜರುಗಲಿದೆ. ಮಾ.30ರಂದು ಮಧ್ಯಾಹ್ನ ದುರ್ಗಾದೇವಿಯ ಅಗ್ನಿಪ್ರವೇಶ ನಡೆಯಲಿದ್ದು, ಸಂಜೆ ಅಪ್ಪು ಮೆಲೋಡಿಸ್ ತಂಡದಿಂದ ರಸಮಂಜರಿ ಕಾರ್ಯಕ್ರಮ ಜರುಗಲಿದೆ ಎಂದು ದುರ್ಗಾದೇವಿ ಟ್ರಸ್ಟ್ ಕಮೀಟಿ ಪ್ರಕಟಣೆಯಲ್ಲಿ ತಿಳಿಸಿದೆ.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಗದಗ, ಮುಂಡರಗಿ ಮತ್ತು ರೋಣ ತಾಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ ಹಾಗೂ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ 2025–26ನೇ ಸಾಲಿಗೆ 6ನೇ ತರಗತಿ ದಾಖಲಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಇದರಲ್ಲಿ 75% ರಷ್ಟು ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಹಾಗೂ 25% ರಷ್ಟು ಇತರೇ ವರ್ಗದವರಿಗೆ ವಿತರಿಸಲಾಗುವುದು. ಅಂಗವಿಕಲ ವಿದ್ಯಾರ್ಥಿಗಳು, ವಿಶೇಷ ಗುಂಪಿಗೆ ಸೇರಿದ ಅಂದರೆ ಅನಾಥ ಮಕ್ಕಳು, ವಿಧವೆಯರ ಮಕ್ಕಳು, ಪೌರ ಕಾರ್ಮಿಕರ ಮಕ್ಕಳು ಇತ್ಯಾದಿಗಳಿಗೆ 3% ರಷ್ಟು ಆಸನಗಳನ್ನು ಕಾಯ್ದಿರಿಸಲಾಗಿದೆ.

6ನೇ ತರಗತಿಗೆ ದಾಖಲಾತಿ ಬಯಸುವ ವಿದ್ಯಾರ್ಥಿಗಳು 5 ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು ಹಾಗೂ ಕುಟುಂಬದ ವಾರ್ಷಿಕ ಆದಾಯ ರೂ. 2.50 ಲಕ್ಷ ಮೀರಿರಬಾರದು, ಅರ್ಜಿಗಳನ್ನು ಆನ್‌ಲೈನ್ https://sevasindhu.karnataka.gov.in (ಸೇವಾಸಿಂಧೂ) ಮೂಲಕ ಅರ್ಜಿ ಸಲ್ಲಿಸಬಹುದಾಗಿದ್ದು, ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ಎಪ್ರಿಲ್ 10 ರವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಇವರನ್ನು ಸಂಪರ್ಕಿಸಬಹುದಾಗಿದೆ.

ಈ ಕೆಳಕಂಡ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳಲ್ಲಿ ಹೆಚ್ಚಿನ ಮಾಹಿತಿಯನ್ನು ಪಡೆಯಬಹುದಾಗಿದೆ.

08371–262911 ತಾಲೂಕು ಪಂಚಾಯತಿ ಆವರಣ, ಮುಂಡರಗಿ; 08372–297494 ಮೌಲಾನಾ ಆಝಾದ್ ಭವನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ; 08381–267258 ತಾಲೂಕು ಪಂಚಾಯತಿ ಆವರಣ, ರೋಣ; 08377–245411 ತಹಸೀಲ್ದಾರ್ ಕಾರ್ಯಾಲಯ ರೂ.ನಂ:20, ನರಗುಂದ ; 08487–242810 ತಾಲೂಕು ಪಂಚಾಯತ್ ಹತ್ತಿರ, ಶಿರಹಟ್ಟಿ.

# ಝುಯನ್‌ಗೆ ಚಿತ್ರಕಲೆಯಲ್ಲಿ ಬೆಳ್ಳಿ ಪದಕ

■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಆಂಧ್ರಪ್ರದೇಶದ ಸ್ಟೇಟ್ ಅಂಡ್ ಕಲ್ಚರ್ ಕಮಿಷನ್ ಕ್ರಿಯೇಟಿವಿಟಿ, ಫೈನ್ ಆರ್ಟ್ ಅಕಾಡೆಮಿ ಆಂಧ್ರಪ್ರದೇಶ ಗುಂಟೂರ್ ಇವರ ಸಂಯುಕ್ತ ಆಶ್ರಯದಲ್ಲಿ 19ನೇ ವರ್ಷದ ಇಂಡಿಯನ್ ಆರ್ಟ್ ಫೆಸ್ಟಿವಲ್ ಅದ್ಧೂರಿಯಾಗಿ ಜರುಗಿತು.

ಈ ಚಿತ್ರಕಲಾ ಸ್ಪರ್ಧೆಯಲ್ಲಿ ಗದುಗಿನ ರಾಯಲ್ ಇಂಗ್ಲೀಷ್ ಮೀಡಿಯಂ ಶಾಲೆಯ ವಿದ್ಯಾರ್ಥಿ ಝುಯನ್ ಖಾದರಸಾಬ ತಹಸೀಲ್ದಾರ ಭಾಗವಹಿಸಿ, ಕ್ರೇಯಾನ್ಸ್ ಮಾಧ್ಯಮದಿಂದ ಪರಿಸರ ಮಾಲಿನ್ಯ ಚಿತ್ರವನ್ನು ರಚಿಸಿ ಬೆಳ್ಳಿ ಪದಕವನ್ನು ಪಡೆದಿದ್ದಾನೆ.

ಸಾಧಕ ವಿದ್ಯಾರ್ಥಿಗೆ ಮತ್ತು ತರಬೇತಿ ನೀಡಿದ ಕಲಾವಿದರಾದ ಡಾ. ಜಾಕೀರಹುಸೇನ ಅವರಿಗೆ ನಗರದ ಎಂ.ಕೆ. ಕೊರ್ಲಹಳ್ಳಿ ಫೌಂಡೇಶನ್ ಟ್ರಸ್ಟ್‌ನ ಅಧ್ಯಕ್ಷರು, ಸರ್ವ ಸದಸ್ಯರು, ಸಿಬ್ಬಂದಿ



ವರ್ಗ ಹಾಗೂ ಅಂಗನವಾಡಿ ಕಾರ್ಯಕರ್ತೆ ಕಸ್ತೂರಿ ಆಲೂರ, ಮುತ್ತು ರಾಯಲ್ ಇಂಗ್ಲೀಷ್ ಮೀಡಿಯಂ ಶಾಲೆಯ ಶಿಕ್ಷಕರು, ಸಿಬ್ಬಂದಿ ವರ್ಗ ಹಾಗೂ ಬಳಗದ ಸಿಬ್ಬಂದಿಗಳು ಅಭಿನಂದನೆ ಸಲ್ಲಿಸಿದ್ದಾರೆ.

### ಅವಾಂತರ ಸೃಷ್ಟಿಸಿದ ಮಳೆ | ಮೊದಲ ಮಳೆಗೆ ಧರೆಗುರುಳಿದ ವಿದ್ಯುತ್ ಕಂಬ, ಮರಗಳು

# ಮಳೆಗಾಲದ ಸಿದ್ಧತೆಗೆ ಮುನ್ಸೂಚನೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸೇರಿ ತಾಲೂಕಿನಾದ್ಯಂತ ಮಂಗಳವಾರ ಇಳಿ ಹೊತ್ತಿಗೆ ಜೋರಾದ ಗಾಳಿ, ಗುಡುಗು-ಸಿಡಿಲಬ್ಬರದೊಂದಿಗೆ 2 ಗಂಟೆಗೂ ಹೆಚ್ಚು ಕಾಲ ಸುರಿದ ಮಳೆಯಿಂದ ಇಳೆ ತಂಪಾಗಿ ಬಿಸಿಲ ಬೇಗೆಯಿಂದ ಬಸವಳಿಯುತ್ತಿದ್ದ ಜನ ನೆಮ್ಮದಿಯ ನಿಟ್ಟುಸಿರು ಬಿಟ್ಟರು.

ಪಟ್ಟಣದ ಮುಖ್ಯ ಬಜಾರ್ ರಸ್ತೆಯಲ್ಲಿಯೇ ಕೊಳಚೆ ನೀರು ಹರಿದು ಸಾರ್ವಜನಿಕರು ಸಂಚಾರಕ್ಕೆ ಪರದಾಡಿದರು. ಇನ್ನು ಬೆಣ್ಣೆಪೇಟೆ, ಬಸ್ತಿಬಣ, ಜನ್ನತ್ ನಗರ, ಈಶ್ವರ ನಗರ, ಲಕ್ಷ್ಮೀ ನಗರ, ಇಂದಿರಾನಗರ, ಬಸವೇಶ್ವರ ನಗರ ಸೇರಿ ಅನೇಕ ಕಡೆ ಚ್ವರಂಡಿಗಳೇ ಇಲ್ಲದಿರುವದರಿಂದ ಚರಂಡಿ ನೀರು ರಸ್ತೆಯ ಮೇಲೆ ನಿಂತು ಸಂಚಾರಕ್ಕೆ ತೊಂದರೆಯಾಯಿತು. ಜೋರಾದ ಗಾಳಿ-ಮಳೆಯಿಂದ ತಾಲೂಕಿನ ಒಡೆಯರ ಮಲ್ಲಾಪುರ, ರಾಮಗೇರಿ ಭಾಗದಲ್ಲಿ ವಿದ್ಯುತ್ ಕಂಬಗಳು ಮತ್ತು ಅನೇಕ ಕಡೆ ಮರಗಳು ಧರೆಗುರುಳಿದ್ದು, ಒಂದು ಗಂಟೆಗೂ ಹೆಚ್ಚು ಕಾಲ ವಿದ್ಯುತ್ ಸಂಪರ್ಕ ಕಡಿತವಾಗಿ ಸಾರ್ವಜನಿಕರು ತೊಂದರೆಪಟ್ಟರು. ಮಳೆಯ



ನಡುವೆಯೂ ವಿದ್ಯುತ್ ಸಂಪರ್ಕ ಕಲ್ಪಿಸಲು ಹೆಸ್ಕಾಂ ಸಿಬ್ಬಂದಿಗಳು ಹರಸಾಹಸಪಟ್ಟರು.

ಒಟ್ಟಿನಲ್ಲಿ ಮುಂಗಾರು ಪೂರ್ವದ ಮೊದಲ ಮಳೆ ಆವಾಂತರನ್ನೇ ಸೃಷ್ಟಿಸಿದೆ. ಇದು ತಹಸೀಲ್ದಾರ, ತಾ.ಪಂ ಇಓ, ಸ್ಥಳೀಯ ಪುರಸಭೆ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಮಳೆಗಾಲದ ಮುಂಜಾಗೃತಾ ಕ್ರಮಗಳನ್ನು ಕೈಗೊಳ್ಳಲು ಎಚ್ಚರಿಸಿದಂತಾಗಿದ್ದು, ಈ ನಿಟ್ಟಿನಲ್ಲಿ ಸಂಬಂಧಪಟ್ಟವರು ಕಾರ್ಯಪ್ರವೃತ್ತರಾಗಬೇಕು ಎಂಬುದು ಸಾರ್ವಜನಿಕರ ಒತ್ತಾಸೆಯಾಗಿದೆ.

ಕೆರೆ-ಕಟ್ಟೆಗಳಲ್ಲಿ ನೀರಿಲ್ಲದೇ ಜಾನುವಾರುಗಳು, ಕುರಿ-ಮೇಕೆಗಳು ನೀರಿಗಾಗಿ ಪರಿತಪಿಸುವಂತಹ ಸಂದರ್ಭದಲ್ಲಿ ಸುರಿದ ಈ ಮಳೆಯಿಂದ ತಾತ್ಕಾಲಿಕ ಉಪಶಮನವನ್ನುಂಟುಮಾಡಿತು. ಅಲ್ಲದೇ ಕಾದು ಕಬ್ಬಿಣದಂತಾಗಿದ್ದ ಭೂಮಿಯಲ್ಲಿ ರಂಟೆ-ಕುಂಟೆಯಿಂದ ಉಳುಮೆ ಮಾಡಲಾಗದೇ ಮಳೆರಾಯನ ಆಗಮನಕ್ಕೆ ಕಾಯುತ್ತಿದ್ದ ರೈತರು ಮಾಗಿ ಉಳುಮೆ ಮಾಡಲು ಅನಕೂಲವಾಯಿತು. ಇನ್ನು ಹಿಂಗಾರಿನ ಒಕ್ಕಲಿ ತಡವಾದ ಮಾಡುತ್ತಿರುವ ರೈತರಿಗೆ, ಹೊಟ್ಟು-ಮೇಲು ಬಣವಿ ನಿರ್ಮಿಸಲು ಸಿದ್ದಪಡಿಸಿಕೊಂಡವರಿಗೆ ಮಳೆಯಿಂದ ಕೊಂಚ ತೊಂದರೆಯೂ ಆಗಿದೆ. ಒಟ್ಟಿನಲ್ಲಿ ಮಳೆ ಬಂದರೆ ಕೇಡಲ್ಲ.. ಎಂಬ ಗಾದೆ ಮಾತಿನಂತೆ ಕಳೆದ 3-4 ದಿನಗಳಿಂದ ಆಗುತ್ತಿರುವ ಮಳೆ ಭೂಮಿಚುನ್ನು ತಂಪಾಗಿಸುವ ಜೊತೆಗೆ ಜನರ ನೆಮ್ಮದಿಗೂ ಕಾರಣವಾಗಿದೆ.

ಪಟ್ಟಣ ಸೇರಿ ತಾಲೂಕಿನಾದ್ಯಂತ ತಗ್ಗು-ಗುಂಡಿಗಳಿಂದ ಕೂಡಿದ್ದ ಬಹುತೇಕ ರಸ್ತೆಯಲ್ಲಿ ನೀರು ನಿಂತು ವಾಹನ ಸವಾರರು ಸಂಚಾರಕ್ಕೆ ಪರದಾಡಿದರು. ಪಟ್ಟಣದಲ್ಲಿನ ಬಹುತೇಕ ರಸ್ತೆಗಳ ಸ್ಥಿತಿಯನ್ನು ಮುಂಗಾರು ಪೂರ್ವದ ಈ ಮಳೆ ಬಿಂಬಿಸಿತ್ತು. ರಸ್ತೆಗಳ ಕೆಟ್ಟ ಸ್ಥಿತಿ ಕಂಡ ಜನರು ಪುರಸಭೆ ಮತ್ತು ಜನಪ್ರತಿನಿಧಿಗಳಿಗೆ ಹಿಡಿಶಾಪ ಹಾಕಿದರು.

# ರಂಜಾನ್ ಹಬ್ಬದ ನಿಮಿತ್ತ ದಿನಸಿ ಕಿಟ್ ವಿತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಡಾ. ಜಾಕೀರ್ ಹುಸೇನ್ ಕಾಲೋನಿಯ ಮುಸ್ಲಿಂ ಜಮಾತ್‌ನ ವತಿಯಿಂದ ಇತ್ತೀಚೆಗೆ ರಂಜಾನ್ ಹಬ್ಬದ ಪ್ರಯುಕ್ತ ಬಡವರಿಗೆ ಆಹಾರ ಧಾನ್ಯ, ದಿನಸಿ ಕಿಟ್ ವಿತರಣೆ ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಸಚಿವ ಡಾ. ಎಚ್. ಕೆ. ಪಾಟೀಲ ಮಾತನಾಡಿ, ಇಲ್ಲಿ ಅಭಿವೃದ್ಧಿಪಡಿಸುತ್ತಿರುವ ಹೊಸ ಖಬರಸ್ಥಾನವನ್ನು ಅಭಿವೃದ್ಧಿಪಡಿಸಲು ಅಗತ್ಯ ಸಹಕಾರ ನೀಡಲಾಗುವುದು ಎಂದರಲ್ಲದೆ, ರಂಜಾನ್ ಹಬ್ಬದ ಪ್ರಯುಕ್ತ ಕಡು ಬಡವರಿಗೆ ಆಹಾರ ಧಾನ್ಯವನ್ನು ವಿತರಿಸುತ್ತಿರುವುದು ಶ್ಲಾಘನೀಯ




ಕಾರ್ಯ ಎಂದರು.

ಪ್ರಾಸ್ತಾವಿಕವಾಗಿ ಪ್ರೊ. ಎಂ.ಎಲ್. ಗುಳೇದಗುಡ್ಡ ಮಾತನಾಡಿ ಜಮಾತ್ ನಡೆದುಬಂದ ದಾರಿಯನ್ನು ವಿವರಿಸಿದರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ ಬಬರ್ಚಿ, ಗ್ಯಾರಂಟಿ ಸಮಿತಿಯ ಅಧ್ಯಕ್ಷರಾದ ಬಿ.ಬಿ. ಅಸೂಟಿ, ನಾಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಗುರಣ್ಣ ಬಳಗಾನೂರ, ಜಿಲ್ಲಾ ವಖ್ಫ್ ಬೋರ್ಡ್ ಅಧ್ಯಕ್ಷ ಜಿ.ಎಂ. ದಂಡಿನ ಪಾಲ್ಗೊಂಡಿದ್ದರು.

ಮೌಲಾನಾ ಮುಫ್ತಿ ಸಾಬೀರ್ ಶಿರಗುಂಪಿ ಕುರ್ ಆನ್ ಪಠಿಸಿದರು. ಜಮಾತಿನ ಅಧ್ಯಕ್ಷರಾದ ಜನಾಬ ಶಾಬುದ್ದೀನ್ ಟೋಪಿವಾಲೆ ಸ್ವಾಗತಿಸಿದರು. ಧ'ರ್ಮಬೋಧ'ಕರಾದ ಅಣ್ಣಿಗೇರಿಯ ಅಬ್ದುಲ್ ಖಾದರ್‌ಸನ್ನು ಭಾಯಿಯವರು ಹಿತನುಡಿಗಳನ್ನಾಡಿದರು. ಎಂ.ಸಿ. ಶೇಖ ವಂದಿಸಿದರು.

ಹೊಸ ಖಬರಸ್ಥಾನ ಅಭಿವೃದ್ಧಿಗೆ ನರವು ನೀಡಿದ ಶಹಜಾದಬಿ ಕಟ್ಟಿಮನಿ, ಅಜಹರ್ ಗುಳೇದಗುಡ್ಡ ಅವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರದಲ್ಲಿ ಬೆಟಗೇರಿಯ ಬದರ್ ಮಸೂತಿಯ ಚೇರಮನ್ ಎಂ.ಎಂ. ಮಾಳೆಕೊಪ್, ಖಾಲಿದ್ ಕೊಪ್ಪಳ, ಫಾರೂಕ್ ಹುಬ್ಬಳ್ಳಿ, ಚಾಂದಸಾಬ ಕೊಟ್ಟೂರ್, ತಯ್ಯಬಅಲಿ ಕುನ್ನಿಬಾವಿ, ಎಸ್. ಕೆ. ನದಾಫ್ ವಕೀಲರು, ಅಬ್ದುಲ್ ರೆಹಮಾನ್ ಹುಯಿಲಗೋಳ ಮುಂತಾದವರಿದ್ದರು.



ಮಂಗಳವಾರ ಶಿರಹಟ್ಟಿ ಮತ್ತು ಸುತ್ತಮುತ್ತಲಿನ ಗ್ರಾಮೀಣ ಪ್ರದೇಶಗಳಲ್ಲಿ ಸಂಜೆ 5ರ ಸುಮಾರಿಗೆ ಸುಮಾರು 1ಗಂಟೆಗೂ ಅಧಿಕ ಕಾಲ ಗುಡುಗು ಸಹಿತ ಭಾರೀ ಮಳೆ ಸುರಿಯಿತು. ಸತತ ಬಿಸಿಲಿನಿಂದ ಕಂಗೆಟ್ಟಿದ್ದ ಸಾರ್ವಜನಿಕರಿಗೆ ಮಳೆಯು ತಂಪೆರೆಯಿತು. ಮುಂಗಾರು ಪೂರ್ವದಲ್ಲಿಯೇ ವರ್ಷಧಾರೆಯ ಆಗಮನವಾಗಿದ್ದು, ಜಮೀನುಗಳಲ್ಲಿ ಬಿತ್ತನೆಗೆ ಅಣಿ ಮಾಡಿದ ಕೆಲವು ಜಮೀನುಗಳಲ್ಲಿ ನೀರು ನಿಂತಿದೆ.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿಗೆ ಪ್ರತಿಷ್ಠಿತ ಶಾಲೆಯಾದ ಜನಸೇವಾ ವಿದ್ಯಾಕೇಂದ್ರ(ರಿ), ಮಾಗಡಿ ರಸ್ತೆ, ಚೆನ್ನನಹಳ್ಳಿ, ಬೆಂಗಳೂರು ನಗರ ಜಿಲ್ಲೆ, ಇಲ್ಲಿಗೆ ಪ್ರತಿಭಾವಂತ ಪ.ಜಾತಿ/ಪ.ಪಂಗಡದ ವಿದ್ಯಾರ್ಥಿಗಳನ್ನು ಸೇರ್ಪಡೆ ಮಾಡಲು 5ನೇ ತರಗತಿಗೆ ಕನ್ನಡ ಮಾಧ್ಯಮ ಹಾಗೂ 8ನೇ ತರಗತಿಗೆ ಕನ್ನಡ/ಆಂಗ್ಲ ಮಾಧ್ಯಮಗಳಿಗೆ ಎಪ್ರಿಲ್ 6ರ ಭಾನುವಾರದಂದು ಪ್ರವೇಶ ಪರೀಕ್ಷೆಗಳು ಜರುಗಲಿದ್ದು, ಪ್ರವೇಶ ಪರೀಕ್ಷೆಯನ್ನು ಬರೆಯಲು ಇಚ್ಛಿಸುವ ವಿದ್ಯಾರ್ಥಿಗಳು ಸಂಬಂಧ ಪಟ್ಟ ಅರ್ಜಿಗಳನ್ನು ಉಪ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ಮೊದಲನೇ ಮಹಡಿ, ಕೊಠಡಿ ಸಂಖ್ಯೆ: 107, ಜಿಲ್ಲಾಡಳಿತ ಭವನ ಗದಗ, ಈ ಕಚೇರಿಯಿಂದ ಪಡೆದು ಎಪ್ರಿಲ್ 3ರೊಳಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ ಗದಗ ಇವರನ್ನು ಸಂಪರ್ಕಿಸಬಹುದಾಗಿದೆ.

### ಕಾಂಗ್ರೆಸ್ ಮುಖಂಡ ಪದ್ಮರಾಜ ಪಾಟೀಲ ಹೇಳಿಕೆ

# ಮಾಧ್ಯಮ ಪ್ರತಿನಿಧಿಗಳಿಗೂ ಮಾಹಿತಿ ನೀಡಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷ್ಮೇಶ್ವರ ತಾಲೂಕು ಪಂಚಾಯಿತಿಯಲ್ಲಿ ಮಂಗಳವಾರ ತಾಲೂಕು ಉಸ್ತುವಾರಿ ಕಾರ್ಯದರ್ಶಿಗಳಾದ ಬೆಳಗಾಂವ ಜಿಲ್ಲಾ ಉಪವಿಭಾಗಾಧಿಕಾರಿ ಶ್ರವಣ ನಾಯಕ ಅಧ್ಯಕ್ಷತೆಯಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯನ್ನು ಮಾಧ್ಯಮದವರನ್ನು ಹೊರಗಿಟ್ಟು ನಡೆಸಿದ ಬಗ್ಗೆ ಗ್ರಾ.ಪಂ ಸದಸ್ಯ, ಕಾಂಗ್ರೆಸ್ ಮುಖಂಡ ಪದ್ಮರಾಜ ಪಾಟೀಲ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ತಾಲೂಕು ಪಂಚಾಯಿತಿಯಲ್ಲಿ 3 ವರ್ಷಗಳಿಂದ ಚುನಾಯಿತ ಆಡಳಿತ ಮಂಡಳಿಯೂ ಇಲ್ಲದ್ದರಿಂದ ಅಧಿಕಾರಿಗಳು ತಮ್ಮ ಮೂಗಿನ ನೇರದಲ್ಲಿ ಕಾರ್ಯ ಮಾಡುತ್ತಿದ್ದಾರೆ. ಪ್ರಸ್ತುತ ಬೇಸಿಗೆ ಕಾಲವಾದ್ದರಿಂದ ತಾಲೂಕಿನಲ್ಲಿ



ಕುಡಿಯುವ ನೀರಿನ ಸಮಸ್ಯೆ, ಜಾನುವಾರುಗಳಿಗೆ ಮೇವಿನ ಕೊರತೆ, ಗ್ರಾಮೀಣ ಪ್ರದೇಶದಲ್ಲಿ ನರೇಗಾ ಕಾಮಗಾರಿ ಇಲ್ಲದೇ ಕೃಷಿ ಕೂಲಿಕಾರರು ಉದ್ಯೋಗ ಅರಸಿ ಹೋಗುತ್ತಿರುವುದು, ಹಾಳಾದ ರಸ್ತೆಗಳು ಇತ್ಯಾದಿ ವಿಷಯಗಳ ಬಗ್ಗೆ ತಹಸೀಲ್ದಾರ, ತಾ.ಪಂ ಇಓ ಮತ್ತು ಎಲ್ಲ ಇಲಾಖೆಗಳ ಅಧಿಕಾರಿಗಳನ್ನೊಳಗೊಂಡ ಸಭೆಯಲ್ಲಿ ಚರ್ಚಿತವಾಗುತ್ತದೆ. ಸಭೆಯಲ್ಲಿ ಚರ್ಚೆಯಾದ ವಿಷಯಗಳ ಬಗ್ಗೆ ಜನರಿಗೆ ತಿಳಿಸುವ ಕಾರ್ಯ ಮಾಡುವ ಪರ್ತಕರ್ತರನ್ನು ಹೊರಗಿಟ್ಟು ಸಭೆ ಮಾಡಿರುವ ಅಧಿಕಾರಿಗಳ ಈ ನಡೆ ಖಂಡನಾರ್ಹವಾಗಿದೆ.

ಸರ್ಕಾರದ ಎಲ್ಲ ಕಾರ್ಯಯೋಜನೆ, ಸೌಲಭ್ಯ, ಅಧಿಕಾರಿಗಳ ಕಾರ್ಯವೈಖರಿಗಳ ಬಗ್ಗೆ ಬೆಳಕು ಚೆಲ್ಲುವಲ್ಲಿ ಮಾಧ್ಯಮದ ಪಾತ್ರ ಮಹತ್ವದ್ದಾಗಿದೆ. ಅಧಿಕಾರಿಗಳು ತಾವು ಮಾಡಿದ ಉತ್ತಮ ಕಾರ್ಯ, ಸಾಧನೆಗಳ ಬಗ್ಗೆ ಪ್ರಚಾರ ಪಡೆಯಲು ಮಾತ್ರ ಪತ್ರಕರ್ತರನ್ನು ತಮಗೆ ಬೇಕಾದಂತೆ ಬಳಸಿಕೊಳ್ಳದೇ ಇಲಾಖೆಯ ಅಧಿಕಾರಿಗಳನ್ನೊಳಗೊಂಡ ಪ್ರಗತಿ ಪರಿಶೀಲನಾ ಸಭೆ, ಸಾಮಾನ್ಯ ಸಭೆ, ಜನೋಪಯೋಗಿ ಕಾರ್ಯಕ್ರಮಗಳಿಗೆ ಮಾಧ್ಯಮ ಪ್ರತಿನಿಧಿಗಳಿಗೂ ಮಾಹಿತಿ ನೀಡಬೇಕು ಎಂದು ಪದ್ಮರಾಜ ಪಾಟೀಲ ಆಗ್ರಹಿಸಿದ್ದಾರೆ.

# ಪರಿಸರ ಸಂರಕ್ಷಣೆ ಎಲ್ಲರ ಜವಾಬ್ದಾರಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಜಾಗತಿಕ ತಾಪಮಾನ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಕಾಲ ಕಾಲಕ್ಕೆ ಸರಿಯಾಗಿ ಮಳೆಯಾಗುತ್ತಿಲ್ಲ. ಇದರಿಂದ ಪರಿಸರದಲ್ಲಿ ಸಾಕಷ್ಟು ದುಷ್ಪರಿಣಾಮಗಳು ಉಂಟಾಗುತ್ತಿದ್ದು, ಪರಿಸರ ಸಂರಕ್ಷಣೆ ಎಲ್ಲರ ಜವಾಬ್ದಾರಿಯಾಗಿದೆ ಎಂದು ನರೇಗಲ್ಲ ಹಿರೇಮಠದ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಸಮೀಪದ ಮಾರನಬಸರಿ ಗ್ರಾಮದಲ್ಲಿ ಸೋಮವಾರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಡಿ ನಮ್ಮೂರ ನಮ್ಮ ಕೆರೆಯ 785ನೇ ಕೆರೆ ಹಸ್ತಾಂತರ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ನಮ್ಮ ಪೂರ್ವಜರು




ಊರಿಗೊಂದು ಕೆರೆ ನಿರ್ಮಿಸಿ, ಅದರ ಸುತ್ತಲೂ ಗಿಡಮರಗಳನ್ನು ಬೆಳೆಸುವ ಮೂಲಕ ಪ್ರಕೃತಿ ಸಮತೋಲನಕ್ಕೆ ಕಾರಣರಾಗಿದ್ದರು. ಕೆರೆ ಉಳಿದರೆ ಅಂತರ್ಜಲ ಹೆಚ್ಚುತ್ತದೆ. ಮರ ಗಿಡಗಳಿಂದ ಮಳೆಯಾಗುತ್ತದೆ. ಪ್ರತಿಯೊಂದು ಗ್ರಾಮದ ಜನರು ಸ್ವ ಇಚ್ಛೆಯಿಂದ ಕೆರೆ ಉಳಿಸುವ, ಮರ ಗಿಡಗಳನ್ನು ಬೆಳೆಸುವ ಕಾರ್ಯ ಮಾಡಬೇಕು ಎಂದರು.

ನಿಡಗುಂದಿಕೊಪ್ಪ ಶಾಖಾ ಶಿವಯೋಗ ಮಂದಿರದ ಅಭಿನವ ಚನ್ನಬಸವ ಸ್ವಾಮೀಜಿ ಮಾತನಾಡಿ, ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಸರ್ಕಾರದಿಂದಲೂ ಆಗಲಾರದಂತಹ ಕಾಮಗಾರಿಗಳನ್ನು ಕೆಲವೇ ಪ್ರಮಾಣದ ಅನುದಾನದಲ್ಲಿ ನಿಸ್ವಾರ್ಥವಾಗಿ, ಅಚ್ಚುಕಟ್ಟಾಗಿ ಮಾಡಲಾಗುತ್ತಿದೆ. ಅದು ಯೋಜನೆಯ ಶಿಸ್ತು ಮತ್ತು ಪ್ರಾಮಾಣಿಕತೆಯನ್ನು ಎತ್ತಿ ತೋರಿಸುತ್ತದೆ ಎಂದರು.

ಪ್ರಾದೇಶಿಕ ನಿರ್ದೇಶಕ ಚಂದ್ರಶೇಖರ ಜೆ, ಜಿಲ್ಲಾ ನಿರ್ದೇಶಕ ಯೋಗೇಶ್ ಎ, ತಾಲೂಕಾ ಯೋಜನಾಧಿಕಾರಿ ಮಹಾಬಲೇಶ್ವರ ಪಟಗಾರ, ಗ್ರಾ.ಪಂ ಸದಸ್ಯ ಶಿವಕುಮಾರ ದಿಂಡೂರ, ಕೆರೆ ಸಮಿತಿ ಅಧ್ಯಕ್ಷ ಚಂದ್ರು ಮಾರನಬಸರಿ ಮಾತನಾಡಿದರು.

ಕೃಷಿ ಮೇಲ್ವಿಚಾರಕ ಶಂಭುಲಿಂಗ ವರದಿವಾಚನ ಮಾಡಿದರು. ಗ್ರಾ.ಪಂ ಅಧ್ಯಕ್ಷ ವೀರಣ್ಣ ಮರಡಿ, ಶ್ರೀಕಾಂತ ಕುಲಕರ್ಣಿ, ಶ್ರೀಶೈಲಯ್ಯ ಶಾಂತಗಿರಿಮಠ, ಶಿವಶರಣಪ್ಪ ಹಾದಿಮನಿ, ಉಮೇಶ ಜಾಲಿಹಾಳ, ಕವಿತಾ ಒಣಗೇರಿ, ಲಲಿತಾ ಮಾರನಬಸರಿ ಉಪಸ್ಥಿತರಿದ್ದರು. ವಲಯದ ಮೇಲ್ವಿಚಾರಕ ರಾಘವೇಂದ್ರ ಗುಡಿ ಸ್ವಾಗತಿಸಿದರು.

ವಿಜಯಲಕ್ಷ್ಮೀ ಹಾದಿಮನಿ ನಿರ್ವಹಿಸಿದರು.

### ತಾಲೂಕು ಮಟ್ಟದ ನರೇಗಾ ಕಾಯಕ ಬಂಧುಗಳಿಗೆ ತರಬೇತಿ

# ಯೋಜನೆಯ ಪ್ರಯೋಜನ ಪಡೆಯಿರಿ

■ವಿಜಯಸಾಕ್ಷಿ ಸುದ್ದಿ, ಗದಗ

ಗ್ರಾಮೀಣ ಪ್ರದೇಶದ ಅಭಿವೃದ್ಧಿಗೆ ನರೇಗಾ ಯೋಜನೆ ಸಹಕಾರಿಯಾಗಿದ್ದು, ಇದರ ಯಶಸ್ಸಿಗೆ ಕಾಯಕ ಬಂಧುಗಳ ಪಾತ್ರ ಪ್ರಮುಖವಾಗಿದೆ ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೊರವನವರ ಹೇಳಿದರು.

ಗದಗ ತಾ.ಪಂ ಸಭಾಂಗಣದಲ್ಲಿ ಜಿಲ್ಲಾ ಪಂಚಾಯತ್ ಗದಗ, ತಾಲೂಕು ಪಂಚಾಯತ್ ಗದಗ ಹಾಗೂ ಮಾಹಿತಿ ಶಿಕ್ಷಣ ಹಾಗೂ ಸಂವಹನ ಇವರ ಸಂಯುಕ್ತ ಆಶ್ರಯದಲ್ಲಿ ಕಾಯಕ ಬಂಧು ತರಬೇತಿಗೆ ಚಾಲನೆ ನೀಡಿ ಅವರು ಮಾತನಾಡುತ್ತಿದ್ದರು.

ನರೇಗಾ ಯೋಜನೆಯಡಿ



ಗ್ರಾಮೀಣ ಭಾಗವನ್ನು ಅಭಿವೃದ್ಧಿಪಡಿಸುವ ಅವಕಾಶ ಕಾಯಕ ಬಂಧುಗಳಿಗೆ ಸಿಕ್ಕಿದೆ. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಯೋಜನೆಯ ಪ್ರಯೋಜನ ದೊರಕಿಸಲು ಶ್ರಮವಹಿಸಬೇಕು. ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯನ್ನು ಜನರು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಜಿಲ್ಲಾ ಐಇಸಿ ಸಂಯೋಜಕ ವಿ.ಎಸ್. ಸಜ್ಜನ ಮಾತನಾಡಿ, ಕಾಯಕ ಬಂಧುಗಳ ಜವಾಬ್ದಾರಿ ಮಹತ್ವದ್ದಾಗಿದ್ದು, 40 ಕೂಲಿಕಾರರ ಮೇಲೆ ಒಬ್ಬರನ್ನು ಮೇಟಿ ಎಂದು ನೇಮಕ ಮಾಡುವರು ಎಂದು ತಿಳಿಸಿದರಲ್ಲದೆ, ಉದ್ಯೋಗ ಬೇಡಿಕೆ ಅರ್ಜಿ ಸಂಖ್ಯೆ 6 ಮತ್ತು ಹಾಜರಾತಿ ತೆಗೆದುಕೊಳ್ಳುವ ಬಗೆ ಸೇರಿದಂತೆ ಇನ್ನಿತರ ವಿಷಯಗಳ ಬಗ್ಗೆ ಮಾಹಿತಿ ನೀಡಿದರು.

ತಾಲೂಕಾ ನರೇಗಾ ಸಹಾಯಕ ನಿರ್ದೇಶಕ ಕುಮಾರ್ ಪೂಜಾರ್ ಮಾತನಾಡಿ, ಗುಳೆ ಹೋಗುವುದನ್ನು ತಪ್ಪಿಸಲು ನರೇಗಾ ಕಾಯ್ದೆ ಜಾರಿಯಾಗಿದೆ. ಈ ಕಾಯ್ದೆಯಿಂದ ದುಡಿಯುವ ಕೈಗಳಿಗೆ ಸ್ಥಳೀಯವಾಗಿ ಕೆಲಸ ಸಿಕ್ಕಿದೆ. ಗಂಡು-ಹೆಣ್ಣಿಗೂ ಸಮಾನ ಕೂಲಿ ದರ ನಿಗದಿಪಡಿಸಲಾಗಿದೆ. ಹಲವು ಕುಟುಂಬಗಳಿಗೆ ಈ ಕಾಯ್ದೆಯಿಂದ ಸಹಾಯವಾಗಿದೆ ಎಂದರು.

ತಾಲೂಕು ಐಇಸಿ ಸಂಯೋಜಕ ವಿರೇಶ ಶಿಬಿರಾರ್ಥಿಗಳಿಗೆ ಕಾಯಕ ಬಂಧು ಕಾರ್ಯಗಳು ಮತ್ತು ಜವಾಬ್ದಾರಿಗಳ ಕುರಿತು ಹೇಳಿದರು. ತಾಲೂಕಾ ಎಮ್‌ಐಎಸ್ ಸಂಯೋಜಕ ಬಸವರಾಜ್ ಭುವನ್ ಜಿಯೋ ಟ್ಯಾಗ್, ಎನ್‌ಎಮ್‌ಎಮ್‌ಎಸ್ ಮತ್ತು ಇತರೆ ವಿಷಯಗಳ ಕುರಿತು ತರಬೇತಿ ನೀಡಿದರು.

ತಾಲೂಕಾ ತಾಂತ್ರಿಕ ಸಂಯೋಜಕ ಪ್ರವೀಣ್ ಕಾಮಗಾರಿ ಆರಂಭದ ಮೊದಲು ಲೈನ್ ಮಾರ್ಕಿಂಗ್ ನೀಡುವದು, ಅಳತೆಗೆ ತಕ್ಕಂತೆ ಕೂಲಿ, ಜಾಬ್ ಕಾರ್ಡ್ ಅಪ್ಡೇಟ್ ವಿಷಯಗಳ ಕುರಿತು ಮಾಹಿತಿ ನೀಡಿದರು.

ತರಬೇತಿಯಲ್ಲಿ ತಾಲೂಕಿನ ಎಲ್ಲ ಗ್ರಾ.ಪಂ ವ್ಯಾಪ್ತಿಯ ಕಾಯಕ ಬಂಧುಗಳು, ತಾಲೂಕಿನ ಬಿಎಫ್‌ಟಿ ಹಾಗೂ ಕಾಯಕ ಮಿತ್ರರು ಹಾಜರಿದ್ದರು.

# ಹಿರಿಯ ರಂಗ ಸಾಧಕ ವಿಜಯಕುಮಾರ ಜಿತೂರಿಗೆ 'ಚಿನ್ಮಯ ಕಲಾಶ್ರೀ' ಪ್ರಶಸ್ತಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಸಾಂಸ್ಕೃತಿಕ ಪರಿಸರದಲ್ಲಿ ತನ್ನದೇ ಆದ ವಿಶಿಷ್ಟ ಸೇವೆ ಸಲ್ಲಿಸುತ್ತಿರುವ ಹಾಗೂ ರಂಗಭೂಮಿಯನ್ನು ಪ್ರಮುಖವಾಗಿಸಿಕೊಂಡು ಹಲವಾರು ಕಾರ್ಯಕ್ರಮಗಳನ್ನು ಆಯೋಜಿಸುತ್ತ, ಕಳೆದ 14 ವರ್ಷಗಳಿಂದ ಸಾಂಸ್ಕೃತಿಕವಾಗಿ ಕ್ರಿಯಾಶೀಲವಾಗಿರುವ ನಗರದ ಚಿನ್ಮಯ ಸಾಂಸ್ಕೃತಿಕ ಅಕಾಡೆಮಿಯು ರಂಗ ಸಾಧಕರಿಗೆ ಕೊಡಮಾಡುವ 'ಚಿನ್ಮಯ ಕಲಾಶ್ರೀ' ಪ್ರಶಸ್ತಿಗೆ ಪ್ರಸ್ತುತ ಸಾಲಿನಲ್ಲಿ ಬೆಟಗೇರಿಯ ಹಿರಿಯ ರಂಗ ಕಲಾವಿದ ವಿಜಯಕುಮಾರ ಜಿತೂರಿ ಭಾಜನರಾಗಿದ್ದಾರೆ.



ವಿಜಯಕುಮಾರ ಜಿತೂರಿ ಕಳೆದ 40 ವರ್ಷಗಳಿಂದ ರಂಗಭೂಮಿ, ಚಲನಚಿತ್ರ ಹಾಗೂ ಕಿರುತೆರೆ ನಟ, ನಿರ್ದೇಶಕ ಹಾಗೂ ಹಿನ್ನೆಲೆ ಗಾಯಕರಾಗಿ ಸೇವೆ ಸಲ್ಲಿಸಿದ್ದಾರೆ. ಅವರ ಸೇವೆಯನ್ನು ಗುರುತಿಸಿ ಚಿನ್ಮಯ ಸಾಂಸ್ಕೃತಿಕ ಅಕಾಡೆಮಿ ಪ್ರಶಸ್ತಿಗೆ ಆಯ್ಕೆ ಮಾಡಿದ್ದು, ಮಾರ್ಚ್ 29ರಂದು ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಹಾಗೂ ಚಿನ್ಮಯ ಸಾಂಸ್ಕೃತಿಕ ಅಕಾಡೆಮಿ ಸಹಯೋಗದಲ್ಲಿ ನಗರದ ತೋಂಟದ ಸಿದ್ದಲಿಂಗಶ್ರೀಗಳ ಕನ್ನಡ ಭವನ, ಕಸಾಪ ಕಾರ್ಯಾಲಯ ಸಭಾ ಭವನದಲ್ಲಿ ನಡೆಯುವ ವಿಶ್ವ ರಂಗಭೂಮಿ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಅಕಾಡೆಮಿಯ ಪ್ರಕಟಣೆ ತಿಳಿಸಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka